ಸಂಪುಟ : 9 ಸಂಚಿಕೆ 71 ಪುಟ : 4 ಬೆಲೆ: ೩.೦೦ ಗುರುವಾರ ಎಪ್ರಿಲ್ 18 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 9 Issue : 71 Pages : 4 Price : 3.00 Thursday April 18 2024 Gadag RNI No:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

ಸಾಮಾನ್ಯ ಪ್ರವೇಶ ಪರೀಕ್ಷೆ: ಪ್ರತಿಬಂಧಕಾಜ್ಞೆ ಜಾರಿ

■ ವಿಜಯಸಾಕ್ಷಿ ಸುದ್ದಿ, ಗದಗ

2024ನೇ ಸಾಲಿನ ಇಂಜನೀಯರಿಂಗ್, ಕೃಷಿ ವಿಜ್ಞಾನ, ವೆಟರಿನರಿ, ಫಾರ್ಮಸಿ, ಬಿ.ಎಸ್.ಸಿ (ನರ್ಸಿಂಗ್) ಮುಂತಾದ ವೃತ್ತಿಪರ ಕೋರ್ಸುಗಳ ಪ್ರವೇಶಕ್ಕಾಗಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು ಎಪ್ರಿಲ್ 18 ಮತ್ತು 19 ರಂದು ನಡೆಸಲಿದೆ.

ಜಿಲ್ಲೆಯಲ್ಲಿ ಒಟ್ಟು 12 ಪರೀಕ್ಷಾ ಕೇಂದ್ರಗಳಿದ್ದು, ಪರೀಕ್ಷಾ ಸಮಯದಲ್ಲಿ ನಕಲು ಮಾಡುವುದು, ಪರೀಕ್ಷಾರ್ಥಿಗಳ ಬದಲು ಬೇರೆಯವರು ಪರೀಕ್ಷೆಗೆ ಹಾಜರಾಗುವುದು ಮುಂತಾದ ಅವ್ಯವಹಾರ ತಡೆಗಟ್ಟಲು ಮತ್ತು ಪರೀಕ್ಷಾ ಕೇಂದ್ರಗಳಲ್ಲಿ ಶಿಸ್ತು ಮತ್ತು ಶಾಂತಿ ಸುವ್ಯವಸ್ಥೆ ಕಾಪಾಡಲು ಪರೀಕ್ಷಾ ಕೇಂದ್ರಗಳ ಸುತ್ತಲೂ 200ಮೀಟರ್ ಪರಿಮಿತಿಯೊಳಗೆ ಎಪ್ರಿಲ್ 18 ಮತ್ತು 19 ರಂದು ಬೆಳಿಗ್ಗೆ 9.30 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ಪ್ರತಿಬಂಧಕಾಜ್ಞೆ ಜಾರಿಗೊಳಿಸಲಾಗಿದೆ.

ಪರೀಕ್ಷಾರ್ಥಿಗಳು ಹಾಗೂ ಪರೀಕ್ಷೆಯಲ್ಲಿ ಕಾರ್ಯ ನಿರ್ವಹಿಸುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಹೊರತುಪಡಿಸಿ ಇತರ ಯಾವುದೇ ವ್ಯಕ್ತಿ ಅಥವಾ ಐದು ಐದಕ್ಕಿಂತ ಹೆಚ್ಚು ಜನರು ಗುಂಪು ಕೂಡುವುದು, ಅಥವಾ ವ್ಯಕ್ತಿಗಳ ಗುಂಪುಗಳ ಪ್ರವೇಶವನ್ನು ನಿರ್ಬಂಧಿಸಲಾಗಿದೆ. ಈ ಪ್ರದೇಶ ವ್ಯಾಪ್ತಿಯಲ್ಲಿ ಬರುವ ಝೆರಾಕ್ಸ್ ಅಂಗಡಿ, ಬುಕ್ ಸ್ಟಾಲ್, ಫೋಟೋ ಕಾಪಿಯರ್ ಗಳನ್ನು ಬಂದ ಮಾಡಲು ಆದೇಶಿಸಿದೆ. ಪರೀಕ್ಷಾ ಕೇಂದ್ರಗಳಲ್ಲಿ ಮೊಬೈಲ್ ಫೋನ್ ಮತ್ತು ಇತರೇ ಸಂಪರ್ಕ ಸಲಕರಣೆಗಳನ್ನು ತರುವುದನ್ನು ನಿಷೇಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಆದೇಶಿಸಿದ್ದಾರೆ.

ಮತದಾನ ಜಾಗೃತಿ: ಮಾನವ ಸರಪಳಿ ಕಾರ್ಯಕ್ರಮ ನಾಳೆ

■ ವಿಜಯಸಾಕ್ಷಿ ಸುದ್ದಿ, ಗದಗ

ಲೋಕಸಭಾ ಚುನಾವಣೆ–2024 ರ ಸಂಬಂಧ ಗದಗ ಜಿಲ್ಲೆಯ ವ್ಯಾಪ್ತಿಯಲ್ಲಿ ಮೇ–07 ರಂದು ಮತದಾನ ಜರುಗಲಿದ್ದು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಮತದಾನ ಮಾಡುವಂತೆ ಪ್ರೇರೇಪಿಸುವ ಸಲುವಾಗಿ ಜಿ.ಪಂ. ಸಿಇಒ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರ ನಿರ್ದೇಶನದಂತೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಸ್ವೀಪ್ ಕಾರ್ಯಕ್ರಮವಾಗಿ ಎಪ್ರಿಲ್ 19 ರಂದು ಬೆಳಿಗ್ಗೆ 9 ಗಂಟೆಗೆ ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದ ಆವರಣದಲ್ಲಿ ಯುವ ಮತದಾರರಿಂದ ಮತದಾನದ ಜಾಗೃತಿ ನಿಮಿತ್ತ ಮಾನವ ಸರಪಳಿ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಈ ಕಾರ್ಯಕ್ರಮಕ್ಕೆ ಜಿಲ್ಲೆಯಲ್ಲಿನ ಪದವಿ ಮಹಾವಿದ್ಯಾಲಯಗಳ ವಿದ್ಯಾರ್ಥಿಗಳು, ಬಿ.ಇ.ಡಿ. ಕಾಲೇಜು ವಿದ್ಯಾರ್ಥಿಗಳು, ಎನ್.ಎಸ್.ಎಸ್. ವಿದ್ಯಾರ್ಥಿಗಳು, ಎನ್.ಸಿ.ಸಿ. ವಿದ್ಯಾರ್ಥಿಗಳು, ಯುವ ಮತದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ವಿನಂತಿಸಲಾಗಿದೆ.

ಈ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿಗಳು, ಜಿ.ಪಂ.ಸಿ.ಇ.ಒ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಹಾಗೂ ಗದಗ ಜಿಲ್ಲೆಯ ಚುನಾವಣಾ ರಾಯಭಾರಿಗಳು ಭಾಗವಹಿಸಲಿದ್ದಾರೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ. ಶರಣು ಗೋಗೇರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬೆಳ್ಳಟ್ಟಿಗೆ ತೆರಳುತ್ತಿದ್ದ ಬಸ್ ಪಲ್ಟಿ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಬುಧವಾರ ಶಿರಹಟ್ಟಿ ಕಡೆಯಿಂದ ಬೆಳ್ಳಟ್ಟಿಗೆ ತೆರಳುತ್ತಿದ್ದ ಸಾರಿಗೆ ಇಲಾಖೆಯ ಬಸ್ ಮಧ್ಯಾಹ್ನ 1.30ರ ಸುಮಾರಿಗೆ ವರವಿ ಕ್ರಾಸ್ ಸಮೀಪ ಪಲ್ಟಿಯಾದ ಘಟನೆ ನಡೆದಿದೆ. ಬಸ್‌ನಲ್ಲಿ ಸುಮಾರು 48 ಜನರು ಪ್ರಯಾಣಿಸುತ್ತಿದ್ದರು ಎನ್ನಲಾಗಿದೆ. ಮೂವರಿಗೆ ಗಾಯಗಳಾಗಿದ್ದು, ಅದೃಷ್ಟವಶಾತ್ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ. ಘಟನಾ ಸ್ಥಳಕ್ಕೆ ಶಾಸಕ ಡಾ. ಚಂದ್ರು ಲಮಾಣಿ ಭೇಟಿ ನೀಡಿ ಪರಿಶೀಲಿಸಿದರು. ತಕ್ಷಣವೇ ಗಾಯಗೊಂಡವರನ್ನು 108 ಅಂಬ್ಯುಲೆನ್ಸ್ ಮೂಲಕ ತಾಲೂಕಾ ಆಸ್ಪತ್ರೆಗೆ ರವಾನಿಸಿ ಚಿಕಿತ್ಸೆ ಕಲ್ಪಿಸಲಾಗಿದೆ.

ಬೃಹತ್ ಮೆರವಣಿಗೆಯೊಂದಿಗೆ ನಾಮಪತ್ರ ಸಲ್ಲಿಸಿದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ

ಹೆಚ್ಚಿನ ಮುನ್ನಡೆಯೊಂದಿಗೆ ಗೆಲ್ಲುವ ವಿಶ್ವಾಸ

■ ವಿಜಯಸಾಕ್ಷಿ ಸುದ್ದಿ, ಹಾವೇರಿ

ಹಾವೇರಿ–ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಬುಧವಾರ ಬೃಹತ್ ಮೆರವಣಿಗೆಯ ಮೂಲಕ ತೆರಳಿ ನಾಮಪತ್ರ ಸಲ್ಲಿಸಿದರು.

ನಾಮಪತ್ರ ಸಲ್ಲಿಕೆಯ ಮೆರವಣಿಗೆಯಲ್ಲಿ ಅಪಾರ ಸಂಖ್ಯೆಯಲ್ಲಿ ಪಕ್ಷದ ಕಾರ್ಯಕರ್ತರು, ಹಿತೈಷಿಗಳು, ಅಭಿಮಾನಿಗಳು ಪಾಲ್ಗೊಂಡಿದ್ದರು. ಬಿಸಿಲಿನ ಝಳವನ್ನೂ ಲೆಕ್ಕಿಸದೇ ಹಾವೇರಿ–ಗದಗ ಕ್ಷೇತ್ರ ವ್ಯಾಪ್ತಿಯ ಎಂಟೂ ಕ್ಷೇತ್ರಗಳಿಂದ ಪಕ್ಷದ ಕಾರ್ಯಕರ್ತರು, ಮಹಿಳೆಯರು, ಯುವಕರು, ಅಭಿಮಾನಿಗಳು ಪಾಲ್ಗೊಂಡಿದ್ದರಲ್ಲದೇ ಎಲ್ಲೆಡೆ ಪಕ್ಷದ ಧ್ವಜ, ನಾಯಕರ ಕಟೌಟ್‌ಗಳು, 'ನಾನು ಶ್ರಮಿಕ–ನನ್ನ ಮತ ಕಾಂಗ್ರೆಸ್ಸಿಗೆ' ಇತ್ಯಾದಿ ಘೋಷಣೆಗಳು ಮೊಳಗಿದವು.

ಟಿಕೆಟ್ ಘೋಷಣೆಯಾದಾಗಿನಿಂದ ಅವಿರತವಾಗಿ ಕ್ಷೇತ್ರದಾದ್ಯಂತ ಸಂಚರಿಸುತ್ತ ಈಗಾಗಲೇ ಒಂದು ಸುತ್ತಿನ ಪ್ರಚಾರ ಪೂರೈಸಿರುವ ಆನಂದಸ್ವಾಮಿ ಗಡ್ಡದೇವರಮಠ, ಬುಧವಾರ ಬೆಳಿಗ್ಗೆ ಹುಕ್ಕೇರಿಮಠದ ಶ್ರೀ ಸದಾಶಿವ ಸ್ವಾಮೀಜಿಗಳ ಆಶೀರ್ವಾದ ಪಡೆದರಲ್ಲದೆ, ನಗರದ ಶ್ರೀ ವೀರಭದ್ರೇಶ್ವರ ದೇಗುಲದಲ್ಲಿ ವಿಶೇಷ ಪೂಜೆ ಸಲ್ಲಿಸಿದರು. ನಂತರ ಸಚಿವರಾದ ಡಾ. ಎಚ್.ಕೆ. ಪಾಟೀಲ, ಶಿವಾನಂದ ಪಾಟೀಲ, ಕೆಪಿಸಿಸಿ ಉಪಾಧ್ಯಕ್ಷ ಡಿ.ಆರ್. ಪಾಟೀಲ, ಕೆಪಿಸಿಸಿ ಕಾರ್ಯದರ್ಶಿ ಸಲೀಂ ಅಹಮದ್, ಶಾಸಕರಾದ ಜೆ.ಎಸ್. ಪಟೇಲ್, ಪ್ರಕಾಶ್ ಕೋಳಿವಾಡ, ಯು.ಬಿ. ಬಣಕಾರ್, ಶ್ರೀನಿವಾಸ ಮಾನೆ, ಬಸವರಾಜ ಶಿವಣ್ಣ ಸೇರಿದಂತೆ ಮುಖಂಡರೊಂದಿಗೆ ತೆರೆದ ವಾಹನದಲ್ಲಿ ರೋಡ್ ಶೋ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಆನಂದಸ್ವಾಮಿ ಗಡ್ಡದೇವರಮಠ, ಎಲ್ಲ ಸಚಿವರು, ಶಾಸಕರು, ಪಕ್ಷದ ಮುಖಂಡರು, ಉತ್ಸಾಹಿ ಕಾರ್ಯಕರ್ತರು, ಮುಖ್ಯವಾಗಿ ಕ್ಷೇತ್ರದ ಮಹಾಜನತೆ ನನ್ನ ಮೇಲೆ ವಿಶ್ವಾಸ, ಪ್ರೀತಿಯಿಟ್ಟು ಸುಡುಬಿಸಿಲಿನಲ್ಲೂ ನನ್ನೊಂದಿಗೆ ನಡೆದಿದ್ದನ್ನು ನಾನೆಂದೂ ಮರೆಯಲಾರೆ. ನಿಮ್ಮೆಲ್ಲರ ಅಭಿಮಾನಕ್ಕೆ ಧನ್ಯವಾದ ಎಂದು ಹೇಳಿದರು.

> ದೇಶದ ಹಿತವನ್ನು ಗಮನದಲ್ಲಿಟ್ಟುಕೊಂಡು, ಎಲ್ಲರೂ ನಮ್ಮ ಪಕ್ಷದ ಮೇಲೆ ನಂಬಿಕೆ ಇಟ್ಟು ಸಾವಿರಾರು ಸಂಖ್ಯೆಯಲ್ಲಿ ಆಗಮಿಸಿ ಬೆಂಬಲ ನೀಡಿದ್ದಾರೆ. ಸಚಿವರಾದ ಎಚ್.ಕೆ. ಪಾಟೀಲ, ಸಲೀಂ ಅಹ್ಮದ್ ಸೇರಿದಂತೆ ಹಿರಿಯ ನಾಯಕರು ಪಾಲ್ಗೊಂಡು ನನಗೆ ಸ್ಫೂರ್ತಿ ತುಂಬಿದ್ದಾರೆ. ಕ್ಷೇತ್ರದ ಮೂಲೆ ಮೂಲೆಯಿಂದ ಕಾರ್ಯಕರ್ತರು ಬಂದಿದ್ದು, ಅವರ ಅಪರಿಮಿತ ಉತ್ಸಾಹದಿಂದ ಮನ ತುಂಬಿ ಬಂದಿದೆ. ಎಲ್ಲರ ಆಶೀರ್ವಾದದಿಂದ ಅತ್ಯಂತ ಹೆಚ್ಚಿನ ಮುನ್ನಡೆಯೊಂದಿಗೆ ಗೆಲುವು ಸಾಧಿಸುವ ವಿಶ್ವಾಸವಿದೆ.
>
> – ಆನಂದಸ್ವಾಮಿ ಗಡ್ಡದೇವರಮಠ.
> ಹಾವೇರಿ–ಗದಗ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ.

ನರೇಗಾ ಕಾಮಗಾರಿ ಸ್ಥಳದಲ್ಲಿ ಮತದಾನ ಜಾಗೃತಿ ಕಾರ್ಯಕ್ರಮದಲ್ಲಿ ಡಾ. ಸಜ್ಜನರ ಅಭಿಮತ

ಸುಭದ್ರ ಸರ್ಕಾರ ರಚನೆಗೆ ಮತದಾನವೇ ಶಕ್ತಿ

■ ವಿಜಯಸಾಕ್ಷಿ ಸುದ್ದಿ, ಗದಗ

ದೇಶದಲ್ಲಿ ನಡೆಯುವ ಚುನಾವಣೆಗಳು ಪ್ರಜಾಪ್ರಭುತ್ವದ ಗೌರವವನ್ನು ಎತ್ತಿ ಹಿಡಿಯುವ ಕೆಲಸ ಮಾಡುತ್ತವೆ. ಸಂವಿಧಾನ ನೀಡಿರುವ ಮತದಾನದ ಹಕ್ಕು ದೇಶದ ಸಂಸತ್ತನ್ನು ನಿರ್ಮಿಸುವ ಹಕ್ಕಾಗಿದೆ. ನಾವೆಲ್ಲ ಚುನಾವಣೆ ದಿನಗಳನ್ನು ಚುನಾವಣೆ ಪರ್ವ ಅಂದರೆ, ಅದು ದೇಶದ ಗರ್ವ ಎಂದೇ ಉಲ್ಲೇಖಿಸಬೇಕಾಗುತ್ತದೆ ಎಂದು ನರಗುಂದ ವಿಧಾನಸಭಾ ಕ್ಷೇತ್ರದ ಸಹಾಯಕ ಚುನಾವಣಾ ಅಧಿಕಾರಿ ಡಾ.ಹಂಪಣ್ಣ ಸಜ್ಜನರ ಅಭಿಪ್ರಾಯಪಟ್ಟರು.

ತಾಲೂಕಿನ ಅರಿಶಿಣಗೋಡಿ ಗ್ರಾಮದಲ್ಲಿ ತಾಲೂಕು ಸ್ವೀಪ್ ಸಮಿತಿ ವತಿಯಿಂದ ಕೈಗೊಂಡ ಕಡ್ಡಾಯ ಮತದಾನ ಜಾಗೃತಿ ಕಾರ್ಯಕ್ರಮಲ್ಲಿ ಭಾಗವಹಿಸಿ ಮಾತನಾಡಿದರು.

ಸುಭದ್ರ ಸರ್ಕಾರ ರಚನೆಗೆ ಪ್ರತಿಯೊಬ್ಬರ ಮತದಾನ ಪ್ರಮುಖವಾಗಿದೆ. ಕಡ್ಡಾಯ ಮತದಾನ ರಕ್ತದಾನ, ಅನ್ನದಾನ ಸೇರಿದಂತೆ ಇನ್ನಿತರೆ ಯಾವುದೇ ದಾನಕ್ಕಿಂತ್ತಲೂ ಹೆಚ್ಚಿನ ದಾನವಾಗಿದೆ. ಕೂಲಿಕಾರರು ಎಲ್ಲರೂ ಮೇ 7ರಂದು ಮತ ಚಲಾಯಿಸಬೇಕು. ಸ್ವಂತ ಊರಿನಿಂದ ಬೇರೆ ಊರಿಗೆ ತೆರಳಿರುವ ತಮ್ಮ ಕುಟುಂಬ ಸದಸ್ಯರನ್ನು ಮತದಾನದ ದಿನ ಕರೆಸಿಕೊಂಡು ಮತದಾನ ಮಾಡಿಸಿ ಎಂದರು.

ಕಾಮಗಾರಿ ಸ್ಥಳದಲ್ಲಿದ್ದ 300ಕ್ಕೂ ಅಧಿಕ ಕೂಲಿಕಾರರಿಗೆ ಗ್ರಾಮೀಣ ಉದ್ಯೋಗದ ಸಹಾಯಕ ನಿರ್ದೇಶಕ ಸಂತೋಷಕುಮಾರ್ ಪಾಟೀಲ್ ಪ್ರತಿಜ್ಞಾವಿಧಿ ಬೋಧಿಸಿದರು. ಕಾಮಗಾರಿ ಸ್ಥಳದಲ್ಲಿ ಕೂಲಿಕಾರರು ಮಾನವ ಸರಪಳಿ ರಚಿಸುವ ಮೂಲಕ ಕಡ್ಡಾಯ ಮತದಾನ ಬಗೆಗಿನ ಘೋಷಣೆಗಳನ್ನು ಕೂಗಿದರು.

> ಚುನಾವಣೆ ಆಯೋಗ ಹಾಗೂ ಜಿಲ್ಲಾ ಮತ್ತು ತಾಲೂಕು ಪಂಚಾಯತಗಳು ಇಡೀ ದೇಶಾದ್ಯಂತ ಸ್ವೀಪ್ ಚಟುವಟಿಕೆ ಮೂಲಕ ಕಡ್ಡಾಯ ಮತದಾನ ಬಗ್ಗೆ ಅರಿವು ಮೂಡಿಸುವ ಕೆಲಸವಾಗುತ್ತಿದೆ. ಎಲ್ಲ ಮತದಾರರು ಕಡ್ಡಾಯವಾಗಿ ಮತದಾನದ ಹಕ್ಕನ್ನು ಚಲಾಯಿಸಿದಾಗ ಮಾತ್ರ ಸ್ವೀಪ್ ಸಮಿತಿ ಕಾರ್ಯ ಯಶಸ್ವಿಯಾಗುತ್ತದೆ ಎಂದು ಡಾ.ಹಂಪಣ್ಣ ಸಜ್ಜನರ ಹೇಳಿದರು.

ಸ್ವೀಪ್ ಚಟುವಟಿಕೆ ಕಾರ್ಯಕ್ರಮದಲ್ಲಿ ನರಗುಂದ ತಾ.ಪಂ ಇ.ಒ ಸೋಮಶೇಖರ್ ಬಿರಾದಾರ್, ಹಿರೇಕೊಪ್ಪ ಪಿಡಿಒ ಕೆ.ಎನ್. ಹದಗಲ್, ಜಿಲ್ಲಾ ಐಇಸಿ ಸಂಯೋಜಕ ವೀರಭದ್ರಪ್ಪ ಸಜ್ಜನ, ತಾಲೂಕು ಐಇಸಿ ಸಂಯೋಜಕ ಸುರೇಶ ಬಾಳಿಕಾಯಿ, ತಾಂತ್ರಿಕ ಸಹಾಯಕ ಅಲ್ತಾಪ ಅಮೀನಬಾವಿ, ಬಿಎಫ್‌ಟಿ ಬಸವರಾಜ ಚಿಮ್ಮನಕಟ್ಟಿ, ಹಿರೇಕೊಪ್ಪ ಗ್ರಾ.ಪಂ ಸಿಬ್ಬಂದಿ ವರ್ಗದವರು ಹಾಜರಿದ್ದರು.

ನಾಮಪತ್ರ ಸಲ್ಲಿಕೆಗೆ ಸಾವಿರಾರು ಜನರ ಆಗಮನದ ನಿರೀಕ್ಷೆ

■ ವಿಜಯಸಾಕ್ಷಿ ಸುದ್ದಿ, ಗದಗ

ಏಪ್ರಿಲ್ 19ರಂದು ಹಾವೇರಿ ಕ್ಷೇತ್ರದ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಕೆ ಮಾಡಲಿದ್ದು, ಅಂದು ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಎಲ್ಲ ವಿಧಾನಸಭಾ ಕ್ಷೇತ್ರಗಳಿಂದ ಸಾವಿರಾರು ಜನರು ಬರುವ ನಿರೀ–ಕ್ಷೆ ಇದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ಗದುಗಿನಲ್ಲಿ ಬುಧವಾರ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ನಾವು ಎಂಟು ಕ್ಷೇತ್ರದ ಜನರು ಕಾರ್ಯಕರ್ತರಿಗೆ ಬರಲು ಸೂಚನೆ ನೀಡಿದ್ದೇವೆ. ಸಾವಿರಾರು ಜನರು ಬರುತ್ತಾರೆ. ಅಂದು ಮಾಜಿ ಸಿಎಂ ಬಿ.ಎಸ್. ಯಡಿಯೂರಪ್ಪ, ಪ್ರತಿಪಕ್ಷದ ನಾಯಕರಾದ ಆರ್. ಅಶೋಕ್, ಮಾಜಿ ಸಚಿವರಾರ ಬೈರತಿ ಬಸವರಾಜ, ಮುರುಗೇಶ್ ನಿರಾಣಿ ಆಗಮಿಸಲಿದ್ದಾರೆ ಎಂದರು.

ಸಂಸದ ಕರಡಿ ಸಂಗಣ್ಣ ಬಿಜೆಪಿ ತೊರೆದಿರುವ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಸಂಗಣ್ಣ ಅವರು ಕಾಂಗ್ರೆಸ್ ಸೇರ್ಪಡೆ ಆಗುತ್ತಿರುವುದು ದುರಾದೃಷ್ಟಕರ. ನಾವು ಅವರ ಮನವೊಲಿಸುವ ಕೆಲಸ ಮಾಡಿದ್ದರೂ, ಕಾಂಗ್ರೆಸ್‌ನವರು ಅವರಿಗೆ ಪ್ರಚೋದನೆ ನೀಡಿದ್ದಾರೆ. ಚುನಾವಣೆ ಸಂದರ್ಭದಲ್ಲಿ ಟಿಕೆಟ್ ಸಿಗದವರು ಬೇಸರ ಮಾಡಿಕೊಳ್ಳುವುದು ಸಹಜ. ಇದು ರಾಷ್ಟ್ರೀಯ ಚುನಾವಣೆ ಆಗಿರುವುದರಿಂದ ಯಾವುದೇ ಸಮಸ್ಯೆ ಆಗುವುದಿಲ್ಲ ಎಂದು ಹೇಳಿದರು.

ಕಾಂಗ್ರೆಸ್‌ನಿಂದ'ಲೂ ಅನೇಕ ನಾಯಕರು ಬಿಜೆಪಿಗೆ ಸೇರ್ಪಡೆ ಆಗುತ್ತಿದ್ದಾರೆ. ಬೆಳ್ಳಟ್ಟಿ ಗ್ರಾಮದಲ್ಲಿ ನೂರಾರು ಜನರು ಬಿಜೆಪಿ ಸೇರ್ಪಡೆಯಾಗಿದ್ದಾರೆ. ಸ್ಥಳೀಯವಾಗಿ ಸಣ್ಣಪುಟ್ಟ ಭಿನ್ನಾಭಿಪ್ರಾಯ ಇದ್ದರೂ ಎಲ್ಲರನ್ನೂ ಒಟ್ಟಿಗೆ ಕರೆದುಕೊಂಡು ಹೋಗುವ ಕೆಲಸ ಮಾಡುತ್ತೇವೆ ಎಂದು ಹೇಳಿದರು.

■ ವಿಜಯಸಾಕ್ಷಿ ಸುದ್ದಿ, ಹಾವೇರಿ

ಹಾವೇರಿ–ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಲು ಹೊರಡುವ ಮುನ್ನ ಆನಂದಸ್ವಾಮಿ ಗಡ್ಡದೇವರಮಠ ಹಾವೇರಿ ನಗರದ ಶ್ರೀ ವೀರಭದ್ರೇಶ್ವರ ದೇಗುಲದಲ್ಲಿ ವಿಶೇಷ ಪೂಜೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಅವರ ಧರ್ಮಪತ್ನಿ ದೀಪಾ, ಸಚಿವ ಎಚ್.ಕೆ. ಪಾಟೀಲ, ಶಾಸಕ ಪ್ರಕಾಶ್ ಕೋಳಿವಾಡ, ಮಾಜಿ ಸಚಿವ ಆರ್.ಶಂಕರ್, ಸಚಿವ ಶಿವಾನಂದ ಪಾಟೀಲ, ಶಾಸಕ ಯು.ಬಿ. ಬಣಕಾರ್, ಕೆಪಿಸಿಸಿ ಕಾರ್ಯಾಧ್ಯಕ್ಷ ಸಲೀಂ ಅಹ್ಮದ್ ಮುಂತಾದವರು ಉಪಸ್ಥಿತರಿದ್ದರು.

ಸಂಪಾದಕೀಯ

ಚುನಾವಣಾ ಪೂರ್ವ ಸಮೀಕ್ಷೆ; ಎಲ್ಲವೂ ನರೇಂದ್ರ ಮೋದಿ ಮಯ

ಲೋಕಸಭೆ ಚುನಾವಣೆ ಪೂರ್ವ ಸಮೀಕ್ಷೆಗಳ ಫಲಿತಾಂಶ ಗಮನಿಸಿದಲ್ಲಿ ಈ ಬಾರಿ ಎಲ್ಲವೂ ನರೇಂದ್ರ ಮೋದಿ ಮಯವಾಗಿರುವ ಲಕ್ಷಣಗಳು ಕಾಣುತ್ತಿವೆ.

ಇದು ಕೇವಲ ಚುನಾವಣಾ ಪೂರ್ವ ಸಮೀಕ್ಷೆ ಮಾತ್ರವಲ್ಲ, ದೇಶಾದ್ಯಂತ ಬಿಜೆಪಿ ಚಿನ್ಹೆ ಅಡಿ ಸ್ಪರ್ಧಿಸುತ್ತಿರುವ ಎಲ್ಲಾ ಅಭ್ಯರ್ಥಿಗಳು ಸಹ ಮೋದಿ ಜಪನಾಮವನ್ನು ಆರಂಭಿಸಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ದೇಶದಲ್ಲಿ 10 ವರ್ಷಗಳಿಂದ ಆಡಳಿತ ನಡೆಸುತ್ತಿದ್ದಾರೆ. ಪ್ರಧಾನಿ ಮೋದಿಗಿಂತಲೂ ದಶಕಗಳ ಕಾಲ ಸಂಸತ್ತಿನಲ್ಲಿ ಬಿಜೆಪಿಯನ್ನು ಪ್ರತಿನಿಧಿಸಿದ ಅನೇಕ ಸಂಸದರು ದೇಶಾದ್ಯಂತ ಇದ್ದಾರೆ.

ಆದರೆ ಅವರೆಲ್ಲರೂ ಈಗ ತಮ್ಮ ಸ್ವಂತ ಸಾಧನೆಯ ಬಲದಿಂದ ಮತ ಕೇಳುತ್ತಿಲ್ಲ. ಕಾರಣ ಬಿಜೆಪಿ ಸಂಸದರು ಕೆಲಸ ಮಾಡಿದ ಕೆಲಸಗಳು ಮತಗಳನ್ನು ತಂದುಕೊಡುವುದಿಲ್ಲ ಎನ್ನುವುದು ಸ್ಪಷ್ಟವಾಗಿದೆ. ಆ ಕಾರಣಕ್ಕಾಗಿ ಬಿಜೆಪಿ ಅಭ್ಯರ್ಥಿಗಳು ಮೋದಿ ಹೆಸರು ಹೇಳುತ್ತಲೇ ಜನರಿಂದ ಮತಯಾಚನೆ ಮಾಡುತ್ತಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಈ 10 ವರ್ಷಗಳಲ್ಲಿ ಅನೇಕ ಕೆಲಸಗಳನ್ನು ಮಾಡಿದ್ದಾರೆ. ಆದರೆ ಅವುಗಳು ಸರಿಯೋ ತಪ್ಪು ಎನ್ನುವ ಬಗ್ಗೆ ಇಲ್ಲಿ ಚರ್ಚೆ ಸೂಕ್ತವಲ್ಲ. ಆದರೆ ಒಬ್ಬ ಸಂಸದರಾಗಿ ಅನೇಕ ಕೆಲಸಗಳನ್ನ ಮಾಡಲು ಅವಕಾಶವಿದ್ದಾಗಲೂ, ಸಂಸತ್ ಸದಸ್ಯರು ಅಭಿವೃದ್ಧಿಯಿಂದ ದೂರವೇ ಉಳಿದರು. ಆ ಕಾರಣಕ್ಕಾಗಿ ಇವತ್ತು ಯಾರೊಬ್ಬರೂ ತಮ್ಮ ವೈಯಕ್ತಿಕ ಸಾಧನೆ ಮೇಲೆ ಮತ ಕೇಳಲು ಸಾಧ್ಯವಾಗುತ್ತಿಲ್ಲ.

ಇದಲ್ಲದರ ಪರಿಣಾಮ ಚುನಾವಣಾ ಪೂರ್ವ ಸಮೀಕ್ಷೆ ಮೇಲಾಗಿದೆ. ಪ್ರಧಾನಿ ಮೋದಿ ಹೆಸರು ಹೇಳಿ ಚುನಾವಣೆ ಎದುರಿಸಿದರು ಮಾತ್ರ ಮತ ಬೀಳುತ್ತದೆ ಎನ್ನುವುದು ಚುನಾವಣಾ ಪೂರ್ವ ಸಮೀಕ್ಷೆಯಿಂದ ಖಾತ್ರಿ ಯಾಗಿದೆ. ಚುನಾವಣಾ ಪೂರ್ವ ಸಮೀಕ್ಷೆಗಳು ಇದನ್ನೇ ಪ್ರತಿಪಾದಿಸುತ್ತವೆ.

ಈ ಬಾರಿಯ ಮೈತ್ರಿ ಕೂಟ ಮತ್ತೊಮ್ಮೆ ಅಧಿಕಾರಕ್ಕೆ ಬರುವುದು ನಿಶ್ಚಯ ಎನ್ನುವುದು ಎಲ್ಲಾ ಚುನಾವಣಾಪೂರ್ವ ಸಮೀಕ್ಷೆಗಳ ಫಲಿತಾಂಶವಾಗಿದೆ. ಬಹುತೇಕ ಆ ವರದಿ ನಿಜವಾಗುವ ಸಾಧ್ಯತೆಗಳು ಇವೆ. ಒಂದೊಮ್ಮೆ ಮೋದಿ ಹೆಸರು ಬಿಟ್ಟು ಕೇವಲ ಬಿಜೆಪಿ ಹೆಸರಿನಲ್ಲಿ ಚುನಾವಣೆ ಎದುರಿಸಿದರೆ, ಒಂದಷ್ಟು ಕಷ್ಟಗಳನ್ನು ಕಮಲ ಕಲಿಗಳು ಎದುರಿಸಬೇಕಾಗುತ್ತದೆ. ಅಂಥ ತಪ್ಪನ್ನು ಬಿಜೆಪಿ ಸದ್ಯಕ್ಕೆ ಮಾಡುವುದಿಲ್ಲ.

ಶಿವಾನಂದ ಪ.ಪೂ ವಿಜ್ಞಾನ ಕಾಲೇಜಿನ ಪಿಯುಸಿ ಫಲಿತಾಂಶ

■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಶ್ರೀ ಜಗದ್ಗುರು ಶಿವಾನಂದ ಪದವಿಪೂರ್ವ ವಿಜ್ಞಾನ ಕಾಲೇಜಿನ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಒಟ್ಟು 65 ವಿದ್ಯಾರ್ಥಿಗಳಲ್ಲಿ 60 ವಿದ್ಯಾರ್ಥಿಗಳು ಉತ್ತೀರ್ಣರಾಗಿ ಶೇ.92 ಫಲಿತಾಂಶವನ್ನು ದಾಖಲಿಸಿದ್ದಾರೆ.

ಅದರಲ್ಲಿ 11 ವಿದ್ಯಾರ್ಥಿಗಳು ಪ್ರಶಸ್ತಿ ಸಹಿತ ಪ್ರಥಮ ಶ್ರೇಣಿಯಲ್ಲಿ, 40 ವಿದ್ಯಾರ್ಥಿಗಳು ಪ್ರಥಮ ಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದಾರೆ. ಕಾಲೇಜಿಗೆ ಪ್ರಥಮ ಸ್ಥಾನವನ್ನು ಶ್ರೇಯಾ ಕಬಾಡಿ, ದ್ವಿತೀಯ ಸ್ಥಾನವನ್ನುಚೈತ್ರಶ್ರೀ ಜಕ್ಕಲಿ ಹಾಗೂ ತೃತೀಯ ಸ್ಥಾನವನ್ನು ಕಾವ್ಯಾ ಓದಿಸುಮಠ ಪಡೆದುಕೊಂಡಿದ್ದಾರೆ. ಕಾಲೇಜಿಗೆ ಕೀರ್ತಿತಂದ ಎಲ್ಲ ವಿದ್ಯಾರ್ಥಿಗಳಿಗೆ ಪೂಜ್ಯ ಶ್ರೀಗಳವರು, ವಿದ್ಯಾಸಂಸ್ಥೆಯ ಪದಾಧಿಕಾರಿಗಳಾದ ಬಿ.ಎಸ್. ಪಾಟೀಲ ಹಾಗೂ ಡಾ. ಜಿ.ಬಿ. ಪಾಟೀಲ, ಕಾಲೇಜಿನ ಪ್ರಾಚಾರ್ಯ ಎಸ್.ವ್ಹಿ. ವರ್ಣೆಕರ, ಕಾಲೇಜಿನ ಸರ್ವ ಸಿಬ್ಬಂದಿಯವರು ಅಭಿನಂದಿಸಿದ್ದಾರೆ.

ಮೋದಿ 'ಭ್ರಷ್ಟಾಚಾರದ ಚಾಂಪಿಯನ್', ಬಿಜೆಪಿ 150ರ ಗಡಿ ದಾಟುವುದಿಲ್ಲ: ರಾಹುಲ್ ಗಾಂಧಿ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಪ್ರಧಾನಿ ನರೇಂದ್ರ ಮೋದಿ "ಭ್ರಷ್ಟಾಚಾರದ ಚಾಂಪಿಯನ್"ಆಗಿದ್ದು, ಚುನಾವಣಾ ಬಾಂಡ್ ಯೋಜನೆಯು ವಿಶ್ವದ ಅತಿದೊಡ್ಡ "ಸುಲಿಗೆ ಯೋಜನೆಯಾಗಿದೆ" ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಹೇಳಿದ್ದಾರೆ.

ಉತ್ತರ ಪ್ರದೇಶದ ಗಾಜಿಯಾಬಾದ್‌ನಲ್ಲಿ ಸಮಾಜವಾದಿ ಪಕ್ಷದ ಮುಖ್ಯಸ್ಥ ಅಖಿಲೇಶ್ ಯಾದವ್ ಅವರೊಂದಿಗೆ ಜಂಟಿ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ರಾಹುಲ್ ಗಾಂಧಿ, ಲೋಕಸಭೆ ಚುನಾವಣೆಯಲ್ಲಿ ಪ್ರತಿಪಕ್ಷ ಇಂಡಿಯಾ ಬಣದ ಪರವಾಗಿ ಜನರ ಒಲವು ಇದೆ ಮತ್ತು ಬಿಜೆಪಿ 150 ಸ್ಥಾನಗಳಿಗೆ ತೃಪ್ತಿಪಡಬೇಕಾಗುತ್ತದೆ ಎಂದು ಹೇಳಿದ್ದಾರೆ.

ಈಗ ರದ್ದುಗೊಂಡಿರುವ ಚುನಾವಣಾ ಬಾಂಡ್‌ಗಳನ್ನು ಟೀಕಿಸಿದ ರಾಹುಲ್ ಗಾಂಧಿ, ಚುನಾವಣಾ ನಿಧಿಯಲ್ಲಿ ಪಾರದರ್ಶಕತೆ ತರಲು ಈ ಯೋಜನೆಯನ್ನು ತರಲಾಗಿದೆ ಎಂದು ಪ್ರಧಾನಿ ಹೇಳಿಕೊಳ್ಳುತ್ತಾರೆ ಆಗಿದ್ದರೆ ಅದನ್ನು ಸುಪ್ರೀಂಕೋರ್ಟ್ ಈಗ ಏಕೆ ರದ್ದುಗೊಳಿಸಿದೆ ಎಂದು ಪ್ರಶ್ನಿಸಿದ್ದಾರೆ.

ಚುನಾವಣಾ ಬಾಂಡ್‌ಗಳ ಯೋಜನೆಯು ವಿಶ್ವದ ಅತಿದೊಡ್ಡ ಸುಲಿಗೆ ಯೋಜನೆಯಾಗಿದೆ. ಭಾರತದ ಉದ್ಯಮಿಗಳಿಗೆ ಅದು ಚೆನ್ನಾಗಿ ತಿಳಿದಿದೆ. ಪ್ರಧಾನಿ ಈ ಬಗ್ಗೆ ಎಷ್ಟೇ ಸ್ಪಷ್ಟಪಡಿಸಿದರೂ ಅದು ಯಾವುದೇ ಪರಿಣಾಮ ಬೀರುವುದಿಲ್ಲ, ಏಕೆಂದರೆ ಪ್ರಧಾನಿ ಭ್ರಷ್ಟಾಚಾರದ ಚಾಂಪಿಯನ್ ಎಂದು ಇಡೀ ರಾಷ್ಟ್ರಕ್ಕೆ ತಿಳಿದಿದೆ ಎಂದು ರಾಹುಲ್ ಗಾಂಧಿ ಹೇಳಿದ್ದಾರೆ.

ಕಾಂಗ್ರೆಸ್ ಒಂದೇ ಬಾರಿಗೆ ಬಡತನವನ್ನು ಕೊನೆಗೊಳಿಸುತ್ತದೆ ಎಂಬ ಮೋದಿಯವರ ಟೀಕೆಗಳ ಕುರಿತು ರಾಹುಲ್ ಗಾಂಧಿ ಪ್ರತಿಕ್ರಿಯಿಸಿದ್ದು, ಬಡತನವು ಒಂದೇ ಬಾರಿಗೆ ಕೊನೆಗೊಳ್ಳುತ್ತದೆ ಎಂದು ಯಾರೂ ಹೇಳಲಿಲ್ಲ ಆದರೆ ನಾವು ಅದಕ್ಕಾಗಿ ಬಲವಾದ ಪ್ರಯತ್ನಗಳನ್ನು ಮಾಡಬಹುದು ಎಂದು ಹೇಳಿದ್ದಾರೆ.

ಒಂದೆಡೆ, ಆರೆಸ್ಸೆಸ್ ಮತ್ತು ಬಿಜೆಪಿ ಸಂವಿಧಾನ ಮತ್ತು ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ನಾಶಮಾಡಲು ಪ್ರಯತ್ನಿಸುತ್ತಿದ್ದರೆ, ಮತ್ತೊಂದೆಡೆ, ಇಂಡಿಯಾ ಮೈತ್ರಿಕೂಟ ಮತ್ತು ಕಾಂಗ್ರೆಸ್ ಪಕ್ಷಗಳು ಸಂವಿಧಾನ ಮತ್ತು ಪ್ರಜಾಪ್ರಭುತ್ವವನ್ನು ರಕ್ಷಿಸಲು ಪ್ರಯತ್ನಿಸುತ್ತಿವೆ ಎಂದು ರಾಹುಲ್ ಗಾಂಧಿ ಹೇಳಿದ್ದಾರೆ. ಉತ್ತರ ಪ್ರದೇಶದ ಅಮೇಥಿಯಿಂದ ಲೋಕಸಭೆ ಚುನಾವಣೆಗೆ ಸ್ಪರ್ಧಿಸುವ ಕುರಿತು ಕೇಳಿದ ಪ್ರಶ್ನೆಗೆ, ಈ ಬಗ್ಗೆ ತಮ್ಮ ಪಕ್ಷದ ನಿರ್ಧಾರಕ್ಕೆ ಬದ್ಧರಾಗಿರುತ್ತೇನೆ ಎಂದು ಹೇಳಿದ್ದಾರೆ.

ಪ್ರಜಾಪ್ರಭುತ್ವದ ಜಾತ್ರೆಯನ್ನು ದೇಶದಾದ್ಯಂತ ಸಂಭ್ರಮದಿಂದ ಆಚರಿಸೋಣ

ಚುನಾವಣೆಯ ಪರ್ವ-ದೇಶದ ಗರ್ವ

ಈ ಚುನಾವಣೆಯು ಭಾರತಕ್ಕೆ ಶ್ರೇಷ್ಠ ಸುಭದ್ರ ಸರ್ಕಾರವನ್ನು ನೀಡಲು ಅತ್ಯವಶ್ಯಕವಾಗಿದೆ. ಭಾರತೀಯ ನಾಗರಿಕರಾದ ನಾವೆಲ್ಲರೂ ಸುಭದ್ರ, ಉತ್ತಮ ಸರ್ಕಾರವನ್ನು ನೀಡಲು 'ಮತದಾನ' ಎಂಬ ಕರ್ತವ್ಯವನ್ನು ಅಚ್ಚುಕಟ್ಟಾಗಿ ಮಾಡಬೇಕಾಗಿದೆ.

ಹಾಗಾದರೆ ಈ ಕರ್ತವ್ಯವನ್ನು ನಾವು ಹಬ್ಬದಂತೆ ವಿಜೃಂಭಣೆಯಿಂದ ಮಾಡಬೇಕು. ಯಾವ ರೀತಿ ಯುಗಾದಿ, ಬಸವ ಜಯಂತಿ, ಹೋಳಿ ಹಬ್ಬ, ರಂಜಾನ್, ಗ್ರಾಮದೇವಿ ಜಾತ್ರೆ, ಉರುಸು ಹೀಗೆ ಹಲವಾರು ಹಬ್ಬಗಳನ್ನು, ಜಾತ್ರೆಗಳನ್ನು ಊರಿನಲ್ಲಿ ವಿಜೃಂಭಣೆಯಿಂದ ಮಾಡುತ್ತೇವೆಯೋ ಅದೇ ರೀತಿ ಪ್ರಜಾಪ್ರಭುತ್ವದ ಜಾತ್ರೆಯನ್ನು ಮತದಾನ ದಿನದಂದು (ಬರುವ ಮೇ 7)ಎಲ್ಲರೂ ದೇಶದಾದ್ಯಂತ ಸಂಭ್ರಮದಿಂದ ಆಚರಿಸಬೇಕಿದೆ.

ಈ ಚುನಾವಣೆ ಹಬ್ಬಕ್ಕೆ ನಾವೆಲ್ಲರೂ ಹೀಗೆ ಸಿದ್ಧರಾಗೋಣ.

* ಮತದಾನ ದಿನದಂದು ಭಾರತದ ಪ್ರತಿಯೊಬ್ಬ ಪ್ರಜೆ ಬೆಳಿಗ್ಗೆ ಬೇಗನೆ ಎದ್ದು 'ನಮ್ಮ ನಡೆ ಮತಗಟ್ಟೆಯ ಕಡೆ-ನಮ್ಮ ಅಮೂಲ್ಯವಾದ ಮತದ ಹಕ್ಕನ್ನು ಚಲಾಯಿಸುವ ಕಡೆ' ಎಂಬ ಮನೋಭಾವನೆಯನ್ನು ಹೊಂದಿ ಮತ ಚಲಾಯಿಸಲು ಮತಗಟ್ಟೆಗೆ ಹೋಗೋಣ.

* ನಮ್ಮ ಊರಿನ ಗ್ರಾಮದೇವಿ ಜಾತ್ರೆಗೆ ಬಂಧು-ಬಳಗವನ್ನು ಯಾವ ರೀತಿ ಆಹ್ವಾನ ನೀಡುತ್ತೇವೆ, ಆ ರೀತಿಯಲ್ಲಿಯೇ ಪ್ರಜಾಪ್ರಭುತ್ವ ಹಬ್ಬಕ್ಕೆ ಅಂದರೆ, ಮತದಾನ ಮಾಡಲಿಕ್ಕೆ ಮತಗಟ್ಟೆ ಕೇಂದ್ರದ ಕಡೆಗೆ ತಾವು ಬಂಧು-ಮಿತ್ರರು ಹಾಗೂ ಬಳಗವನ್ನೆಲ್ಲವನ್ನು ಕರೆದುಕೊಂಡು ಹೋಗಿ ಒಮ್ಮೆಲೇ ಸಾಲಲ್ಲಿ ನಿಂತು ಪ್ರಜಾತಂತ್ರದ ಯಶಸ್ಸಿಗೆ ಬಟನ್ ಒತ್ತಿ.

* ಜಾತ್ರೆಯಲ್ಲಿ ಎಲ್ಲರೂ ಸೇರಿ ತೇರನ್ನು ಎಳೆದಂತೆ ಇಲ್ಲಿ ಎಲ್ಲರೂ ಪ್ರಜಾಪ್ರಭುತ್ವವೆಂಬ ತೇರನ್ನು ತಮ್ಮ ಊರಿನಲ್ಲಿಯೇ ಅತಿ ಹೆಚ್ಚಿನ ವೋಟ್ ಮಾಡಿ. ಶೇಕಡಾವಾರು ಮತದಾನವನ್ನು ಹೆಚ್ಚಿಸುವ ಮೂಲಕ ಗೆಳೆಯರೆಲ್ಲ ಸೇರಿ ಎಳೆಯಿರಿ.

* ಕುಟುಂಬ ಸಮೇತ ಯಾವುದೇ ಮೋಜು ಮಸ್ತಿ, ಮನರಂಜನೆ,

ಪ್ರವಾಸಿ ತಾಣಗಳಿಗೆ ಹೋಗದೇ ಮನೆಯಲ್ಲಿಯೇ ಇರಿ, ಮತದಾನ ಮಾಡಿ.

* ಅನ್ನದಾನ, ಅಕ್ಷರದಾನ, ನೇತ್ರದಾನ ಹೇಗೆ ಶ್ರೇಷ್ಠ ದಾನವೋ ಅದೇ ರೀತಿ ಮತದಾನ ಕೂಡ ಶ್ರೇಷ್ಠ ಕಾರ್ಯ.

* ನಗರದ ಜನ ಮೇ 7ರಂದು ಮನೆಯಿಂದ ಹೋರಗೆ ಬಂದು 100ಕ್ಕೆ 100ರಷ್ಟು ಮತದಾನ ಮಾಡುವ ಕಾಯಕ ಮಾಡುವದು.

* ಭಾರತೀಯರಾದ ಪ್ರತಿಯೊಬ್ಬರ ಮತ ಮೌಲ್ಯಯುತವಾದ್ದದ್ದು. ಅದನ್ನು ನಾನು ಮಾಡಿಯೇ ಮಾಡುತ್ತೇನೆ ಎಂಬ ಆತ್ಮವಿಶ್ವಾಸದಲ್ಲಿ ಇರಿ.

* ನೀವು ಮತ ಹಾಕಿದರೆ ನೀವು ನಿಮ್ಮ ದೇಶದ ಹೀರೋ. ಮತ ಹಾಕದಿದ್ದರೆ ಜೀರೊ ಎಂದು ತಿಳಿಯಿರಿ.

* ಕೆಲವು ಸಾರಿ ಅಭ್ಯರ್ಥಿ ಒಂದು ಮತದ ಅಂತರದಿಂದ ಗೆದ್ದ ಉದಾಹರಣೆ ಇದೆ. ಆ ನಿರ್ಣಾಯಕ ಮತ ನಿಮ್ಮದೇ ಆಗಿರಬಹುದು. ಆದ್ದರಿಂದ ತಡ ಯಾಕೆ? ಬೇಗ ಹೋಗಿ ಮೇ 7ರಂದು ಮತ ಹಾಕಿ.

* ಅಂಚೆ ಮತ ಪಡೆದವರು ಸರಿಯಾಗಿ ಎಲ್ಲ ನಿಯಮ ಪಾಲಿಸಿ, ಜೂನ್ 4 ಮತ ಎಣಿಕೆಗೆ ಮೊದಲು ಚುನಾವಣಾಧಿಕಾರಿಗೆ ತಲುಪುವಂತೆ ಮತದಾನ ಮಾಡಿ.

* ನಮ್ಮ ದೇಶದಲ್ಲಿ ಅಂದಾಜು ಶೇ.30ರಷ್ಟು ಯುವ ಮತದಾರರು ಇದ್ದಾರೆ. ಇಂದಿನ ಯುವಕರೇ ನಾಳಿನ ನಾಯಕರು. ಆದ್ದರಿಂದ ನಿಮ್ಮ ನಾಯಕರನ್ನು ಕಾಯಾ, ವಾಚಾ, ಮನಸಾ ಯೋಗ್ಯತೆ, ಮಾನದಂಡದ ಆಧಾರದ ಮೇಲೆ ಆಯ್ಕೆ ಮಾಡಬೇಕು. ಯಾವುದೇ ಆಮಿಷಕ್ಕೆ ಒಳಗಾಗದೇ ತಮ್ಮ ಮತ ಹಾಕಿ.

* ಯುವಜನರೇ, ನಮ್ಮ ದೇಶದ ಸ್ಥಿರ ಸರ್ಕಾರ ತಮ್ಮ ಮತದಾನದ ಮೇಲೆ ನಿರ್ಧಾರ ಆಗಬಹುದು. ಆದ್ದರಿಂದ ಮೊದಲ ಸಾರಿ ಮತದಾನದ ಮಾಡುವವರು ಉತ್ಸಹದಿಂದ ಮತಗಟ್ಟೆಗೆ ಬನ್ನಿ, ನಿಮ್ಮ ಹಕ್ಕು ಚಲಾಯಿಸಿ. ಧೈರ್ಯದಿಂದ ಹೇಳಿ, 'ನನ್ನ ಮತ-ನನ್ನ ಹಕ್ಕು' ಎಂದು.

ಬನ್ನಿ ಭಾರತೀಯರೇ, ಎಲ್ಲರೂ ಸೇರಿ ಪ್ರಜಾಪ್ರಭುತ್ವದ ಹಬ್ಬ ಮಾಡೋಣ. ಮತಹಾಕಿ, ಮತಗಟ್ಟೆಯಿಂದ ಹೊರಗೆ ಬಂದು ಕುಟುಂಬದ ಸಮೇತ ಸೆಲ್ಫಿ ತೆಗೆದುಕೊಳ್ಳೋಣ. ಜವಾಬ್ದಾರಿಯುತ ನಾಗರಿಕನಾಗಿ ನಾವು ಮತದಾನ ದಿನಾಂಕದಂದು ನಮ್ಮ ಕರ್ತವ್ಯ ಮಾಡೋಣ.

– ಅಜ್ಜಪ್ಪ ಅಂಗಡಿ.
ಬಿ.ಆರ್.ಪಿ, ಬೈಲಹೊಂಗಲ.

ಹಳ್ಯಾಳ ಗ್ರಾಮದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ

ಧರ್ಮ ಪರಿಪಾಲನೆಯಿಂದ ಜೀವನದಲ್ಲಿ ಶ್ರೇಯಸ್ಸು

■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಭೌತಿಕ ಬದುಕಿಗೆ ಸಂಪತ್ತಷ್ಟೇ ಮುಖ್ಯವಲ್ಲ. ಅದರೊಟ್ಟಿಗೆ ಧರ್ಮ ಪ್ರಜ್ಞೆ ಮತ್ತು ಸದಾಚಾರ ಬೆಳೆದು ಬರಬೇಕು. ಶುದ್ಧವಾದ ಬುದ್ಧಿ ಸಂಪತ್ತಿನ ಆಗರ. ಧರ್ಮ ಪರಿಪಾಲನೆಯಿಂದ ಜೀವನದಲ್ಲಿ ಸುಖ-ಶಾಂತಿ ಮತ್ತು ಶ್ರೇಯಸ್ಸು ಪ್ರಾಪ್ತವಾಗುವುದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ತಾಲೂಕಿನ ಹಳ್ಯಾಳ ಗ್ರಾಮದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಹಾಗೂ ಜಾತ್ರಾ ಮಹೋತ್ಸವ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಪ್ರಕೃತಿ ಮಾನವನನ್ನು ಸೃಷ್ಟಿಸಿದರೆ, ಸಂಸ್ಕಾರ ಆದರ್ಶ ವ್ಯಕ್ತಿಗಳನ್ನು ಸೃಷ್ಟಿಸುತ್ತದೆ. ಆಡಿದ ಮಾತು ಉಳಿಸಿಕೊಳ್ಳುವುದೇ ನಿಜವಾದ ಧರ್ಮ. ಭೌತಿಕ ಬದುಕಿನಿಂದ ಉಂಟಾಗುವ ಅತೃಪ್ತಿ ಮತ್ತು

ಅಸಮಾಧಾನ ನಿವಾರಣೆಗೆ ಧರ್ಮವೊಂದೇ ಸುಲಭ ಮಾರ್ಗ. ಬಿತ್ತಿದ ಬೀಜದಂತೆ ಫಸಲು ಹೇಗೋ ಹಾಗೆ ನಮ್ಮ ಆಚರಣೆಯಂತೆ ಫಲ ಪ್ರಾಪ್ತಿ. ಕರ್ತವ್ಯ, ಶಿಸ್ತು, ಶ್ರದ್ಧೆ, ಫಲ ಮತ್ತು ಸಮರ್ಪಣಾ ಮನೋಭಾವವನ್ನು ಮನುಷ್ಯ ಬೆಳೆಸಿಕೊಳ್ಳಬೇಕಾದ ಅಗತ್ಯವಿದೆ ಎಂದರು.

ನೇತೃತ್ವ ವಹಿಸಿದ ಸುಳ್ಳ ಪಂಚಗೃಹ ಹಿರೇಮಠದ ಶಿವಸಿದ್ಧರಾಮೇಶ್ವರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ವಿಜ್ಞಾನ ಮತ್ತು ತಂತ್ರಜ್ಞಾನ ಬೆಳೆದಂತೆ ಮನುಷ್ಯನ ಭಾವನೆಗಳು ಬೆಳೆಯುತ್ತಿಲ್ಲ. ಮಾತಿಗೆ ತೂಕ ಬರುವುದು ಸತ್ಯದಿಂದಲ್ಲದೇ ಅಸತ್ಯದಿಂದಲ್ಲ. ಉಜ್ವಲ ಜೀವನಕ್ಕೆ ಶ್ರೀ ಜಗದ್ಗುರು ರೇಣುಕಾಚಾರ್ಯರ ವಿಚಾರ ಧಾರೆ ನಮ್ಮೆಲ್ಲರ ಬಾಳಿಗೆ ಬೆಳಕು ತೋರುತ್ತವೆ ಎಂದರು.

> ಗುರುನಾಥಗೌಡ ಮಾದಾಪುರ ಪ್ರಾಸ್ತಾವಿಕ ಮಾತನಾಡಿ, ತನಗಾಗಿ ಬಯಸುವುದು ಜೀವ ಗುಣ. ಎಲ್ಲರಿಗಾಗಿ ಬಯಸುವುದು ದೇವ ಗುಣ. ಸ್ವಾರ್ಥ ರಹಿತ ಬದುಕಿಗೆ ಬಲವಿದೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ನಿರೂಪಿಸಿದ ತತ್ವ ಸಿದ್ಧಾಂತಗಳ ಅರಿವು ಆಚರಣೆಯಿಂದ ಮಾನವ ಜೀವನ ಸ್ವಾರ್ಥಕಗೊಳ್ಳುತ್ತದೆ ಎಂದರು.

ಬಿ.ಡಿ. ನಾಗನಗೌಡ್ರ, ಟಾಕನಗೌಡ ಗಬ್ಬೂರು, ಬಸವರಾಜ ಹಸರಡ್ಡಿ, ವಿಜಯಕುಮಾರ ಬೆಳವಟಗಿ, ಖಾದರಸಾಬ ನದಾಫ, ಮಾರುತಿ ಅಮರಗೋಳ ಮೊದಲಾದ ಗಣ್ಯರು ಉಪಸ್ಥಿತರಿದ್ದರು. ಗಂಗಾಧರಸ್ವಾಮಿ ಹಿರೇಮಠ ಭಕ್ತಿಗೀತೆ ಹಾಡಿದರು. ಗಂಗಾಧರ ನಾಗನಗೌಡ್ರ ಸ್ವಾಗತಿಸಿದರು.

ಚೆಕ್ ಪೋಸ್ಟ್‌ಗೆ ಇಒ ಭೇಟಿ, ತಪಾಸಣೆ

■ ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಲೋಕಸಭೆ ಚುನಾವಣೆ ಹಿನ್ನೆಲೆಯಲ್ಲಿ ತಾಲೂಕಿನ ಹಳ್ಳಿಕೇರಿ ಚೆಕ್ ಪೋಸ್ಟ್‌ಗೆ ಭೇಟಿ ನೀಡಿದ ತಾಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ತಾಲೂಕು ಸ್ವೀಪ್ ಸಮಿತಿ ಅಧ್ಯಕ್ಷ ವಿಶ್ವನಾಥ ಹೊಸಮನಿ ವಾಹನಗಳ ತಪಾಸಣೆ ನಡೆಸಿದರು.

ಚುನಾವಣೆ ಅಕ್ರಮ ತಡೆಗಟ್ಟಲು ತಾಲೂಕು ಆಡಳಿತ ಮತ್ತು ಚುನಾವಣಾಧಿಕಾರಿಗಳು ಹದ್ದಿನ ಕಣ್ಣಿಟ್ಟಿದ್ದು, ಚೆಕ್ ಪೋಸ್ಟ್ ಗೆ ಭೇಟಿ ನೀಡುವ ಮೂಲಕ ಅಕ್ರಮ ತಡೆಗೆ ಕೈಗೊಂಡಿರುವ ಕ್ರಮಗಳ ಬಗ್ಗೆ ಪರಿಶೀಲನೆ ನಡೆಸಿದರು.

ಚೆಕ್ ಪೋಸ್ಟ್ ನಲ್ಲಿ ನಡೆಸಲಾಗುವ ತಪಾಸಣೆಯ ದಾಖಲೆಗಳನ್ನು ಮತ್ತು ತಪಾಸಣೆ ಕಾರ್ಯವನ್ನು ಪರಿಶೀಲಿಸಿದ ಇಒ, ಖುದ್ದು ತಾವೇ ಕೆಲಹೊತ್ತು ವಾಹನಗಳನ್ನು ತಡೆದು ಸೂಕ್ತ ದಾಖಲೆಗಳಿಲ್ಲದೇ ಸಾಗಿಸುವ ಹಣ, ಮದ್ಯ, ಚಿನ್ನಾಭರಣ ಹಾಗೂ ವಾಣಿಜ್ಯ ಸರಕುಗಳನ್ನು ಸಾಗಾಟ ಮಾಡಲಾಗುತ್ತಿದೆಯೇ ಎಂದು ಪರಿಶೀಲಿಸಿದರು.

ಸ್ಥಳದಲ್ಲಿದ್ದ ಚೆಕ್ ಪೋಸ್ಟ್ ಸಿಬ್ಬಂದಿಗಳಿಗೆ ಅಕ್ರಮಗಳಿಗೆ ಕಡಿವಾಣ ಹಾಕುವಂತೆ ತಿಳಿಸಿದರು.

ಕಾಂಗ್ರೆಸ್‌ಗೆ ಜನರ ಅಭೂತಪೂರ್ವ ಬೆಂಬಲ

■ ವಿಜ

ಉತ್ತಮ ನಾಳೆಗಾಗಿ ಕಡ್ಡಾಯ ಮತದಾನ ಅಗತ್ಯ

■ ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಮತದಾನ ಅತ್ಯಮೂಲ್ಯವಾದ ಹಕ್ಕು. ಉತ್ತಮ ನಾಳೆಗಳಿಗಾಗಿ ಹಾಗೂ ಸದೃಢ ಆಡಳಿತಕ್ಕಾಗಿ ತಪ್ಪದೇ ಎಲ್ಲರೂ ಮತ ಚಲಾಯಿಸಬೇಕು ಎಂದು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ತಾಲೂಕು ಸ್ವೀಪ್ ಸಮಿತಿ ಅಧ್ಯಕ್ಷ ವಿಶ್ವನಾಥ ಹೊಸಮನಿ ಹೇಳಿದರು.

ತಾ.ಪಂ ಆವರಣದಲ್ಲಿ ತಾಲೂಕು ಸ್ವೀಪ್ ಸಮಿತಿಯಿಂದ ಹಮ್ಮಿಕೊಂಡಿದ್ದ ಕಡ್ಡಾಯ ಮತದಾನಕ್ಕಾಗಿ ಬಿಸಿಯೂಟ ಸಿಬ್ಬಂದಿಗಳ ಕಾಲ್ನಡಿಗೆ ಜಾಥಾ ಹಾಗೂ ಕಡಿಮೆ ಮತದಾನವಾದ ಮತಗಟ್ಟೆಗಳ ವ್ಯಾಪ್ತಿಯ ಮನೆ ಮನೆ ಭೇಟಿ ಜಾಗೃತಿ ಅಭಿಯಾನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಪಟ್ಟಣದ ತಾ.ಪಂ ಆವರಣದಿಂದ ಆರಂಭವಾದ ಕಾಲ್ನಡಿಗೆ ಜಾಗೃತಿ ಜಾಥಾ ಕಡ್ಡಾಯ ಮತದಾನದ ಘೋಷಣೆಗಳನ್ನು ಕೂಗುತ್ತಾ ಜಾಗೃತಿ ಮೂಡಿಸುವ ಮೂಲಕ ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿತು. ನಂತರ ಕೊಪ್ಪಳ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸುವ ಮೂಲಕ ಕಡ್ಡಾಯ ಮತದಾನಕ್ಕೆ ಘೋಷಣೆಗಳ ಮೂಲಕ ಕರೆ ನೀಡಿದರು.

ನಂತರ ಕಡಿಮೆ ಮತದಾನವಾದ ಅನ್ನದಾನೇಶ್ವರ ನಗರದ 42ರಿಂದ 47ನೇ ಮತಗಟ್ಟೆಗಳ ವ್ಯಾಪ್ತಿಯ ಮನೆ ಮನೆಗಳಿಗೆ ಭೇಟಿ ನೀಡಿ ತಪ್ಪದೇ ಮತ ಚಲಾಯಿಸುವಂತೆ ಮನವರಿಕೆ ಮಾಡುವ ಮೂಲಕ ಜಾಗೃತಿ ಮೂಡಿಸಲಾಯಿತು. ಈ ಸಂದರ್ಭದಲ್ಲಿ ಬಿಇಒ ಎಚ್.ಎಂ. ಫಡ್ನೇಶಿ, ಅಕ್ಷರ ದಾಸೋಹ ಸಹಾಯಕ ನಿರ್ದೇಶಕಿ ಡಾ. ರಂಜನಾ ತಳಗೇರಿ, ಮಹೇಶ ಜಕ್ಕಲಿ, ಮಹಾಂತೇಶ ಖೋತ, ಎಚ್.ಎಂ. ಕಾತರಕಿ, ಸಿ.ಬಿ. ಪಾಟೀಲ ಇತರರಿದ್ದರು.

ಕನ್ನಡಿಗರನ್ನು ಒಕ್ಕಲೆಬ್ಬಿಸಿದ ಗೋವಾ ಬಗ್ಗೆ ಆಕ್ರೋಶ

■ ವಿಜಯಸಾಕ್ಷಿ ಸುದ್ದಿ, ಗದಗ

ಇಡೀ ಗೋವಾದಲ್ಲಿ ಕನ್ನಡಿಗರು ಯಾರೂ ಇರಬಾರದು ಎಂಬ ತೀರ್ಮಾನಕ್ಕೆ ಅಲ್ಲಿನ ಸರ್ಕಾರ ಬಂದಂತಿದೆ. ರಾಷ್ಟ್ರಪತಿಗಳು ಕೂಡಲೇ ಮಧ್ಯಪ್ರವೇಶಿಸಿ ಗೋವಾ ಸರ್ಕಾರವನ್ನು ವಜಾಗೊಳಿಸಿ ಕನ್ನಡಿಗರಿಗೆ ನ್ಯಾಯ ಕೊಡಿಸಬೇಕು ಎಂದು ಕರವೇ ರಾಜ್ಯ ಕಾರ್ಯದರ್ಶಿಗಳಾದ ಹನಮಂತಪ್ಪ ಅಬ್ಬಿಗೇರಿ ಆಗ್ರಹಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಉತ್ತರ ಗೋವಾದ ಸಾಂಗೋಲ್ಡಾ ಪ್ರದೇಶದಲ್ಲಿ ಭಾನುವಾರ 15ಕ್ಕೂ ಹೆಚ್ಚು ಕನ್ನಡಿಗರ ಮನೆಗಳನ್ನು ಜೆಸಿಬಿ ಬಳಸಿ ಧ್ವಂಸಗೊಳಿಸಲಾಗಿದೆ. ಅವರಿಗೆ ಅನ್ನ, ನೀರು, ಸೂರು ಇಲ್ಲದಂತೆ ಮಾಡಲಾಗಿದೆ. ನಾಲ್ಕು ದಶಕಗಳಿಂದ ಆ ಪ್ರದೇಶದಲ್ಲಿ ವಾಸವಾಗಿದ್ದ ಕನ್ನಡಿಗರನ್ನು ಏಕಾಏಕಿ ತೆರವುಗೊಳಿಸಲಾಗಿದೆ. 15 ಕನ್ನಡಿಗರ ಕುಟುಂಬಗಳು ಬೀದಿಪಾಲಾಗಿವೆ. ಗೋವಾದಲ್ಲಿ ಕನ್ನಡಿಗರನ್ನು ಗುರಿಯಾಗಿಟ್ಟು ಕೊಂಡು ಅಲ್ಲಿನ ಸರ್ಕಾರ ತೆರವು ಕಾರ್ಯಾಚರಣೆ ಮಾಡುತ್ತಿರುವುದು ಇದೇ ಮೊದಲೇನಲ್ಲ ಎಂದು ಆರೋಪಿಸಿದ್ದಾರೆ.

ಉತ್ತರ ಕರ್ನಾಟಕದ ಕನ್ನಡಿಗರು ಹೆಚ್ಚಿನ ಸಂಖ್ಯೆಯಲ್ಲಿ ಅಲ್ಲಿ ದುಡಿಯಲು ಹೋಗಿ ನೆಲೆಸಿದ್ದಾರೆ. ಕೂಡಲೇ ಗೋವಾ ಸರ್ಕಾರ ಮಾನವೀಯತೆಯ ದೃಷ್ಟಿಯಿಂದ ಆ ಕುಟುಂಬಗಳಿಗೆ ಸೂರು ಒದಗಿಸಿ ನೆಲೆಸಲು ಅವಕಾಶ ಮಾಡಿಕೊಡಬೇಕೆಂದು ಆಗ್ರಹಿಸಿದ್ದಾರೆ.



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣದಲ್ಲಿ ಶ್ರೀರಾಮ ನಮಮಿ ಆಚರಣೆಯ ಸಂದರ್ಭದಲ್ಲಿ ತನುಷ್ ಎಸ್.ಮಣ್ಣೂರ ಪ್ರಭು ಶ್ರೀರಾಮ ಪೋಷಾಕಿನಲ್ಲಿ ಕಾಣಿಸಿಕೊಂಡು ಎಲ್ಲರ ಗಮನ ಸೆಳೆದಿದ್ದು ಹೀಗೆ.

ದ್ಯಾಮವ್ವ ದೇವಿ ಜಾತ್ರಾ ಮಹೋತ್ಸವಕ್ಕೆ ತೆರೆ

■ ವಿಜಯಸಾಕ್ಷಿ ಸುದ್ದಿ, ರೋಣ

ಸತತ ಮೂರು ದಿನಗಳ ಕಾಲ ಮಾರನಬಸರಿ ಗ್ರಾಮದಲ್ಲಿ ಜರುಗಿದ ಗ್ರಾಮ ದೇವತೆಯ ಜಾತ್ರಾಮಹೋತ್ಸವಕ್ಕೆ ಸಂಭ್ರಮದ ತೆರೆ ಬಿದ್ದಿದ್ದು, ಮೂರು ದಿನಗಳ ಧಾರ್ಮಿಕ ಕಾರ್ಯದಲ್ಲಿ ಮೂವತ್ತು ಸಾವಿರಕ್ಕೂ ಹೆಚ್ಚಿನ ಭಕ್ತರು ಪಾಲ್ಗೊಂಡು ದ್ಯಾಮವ್ವ ದೇವಿಯ ದರ್ಶನ ಪಡೆದರು.

ಗ್ರಾಮ ದೇವತೆಯ ಜಾತ್ರೆ ಕೊನೆಯದಾಗಿ 5 ವರ್ಷಗಳ ಹಿಂದೆ ನಡೆದಿತ್ತು. ಹೀಗಾಗಿ, ಗ್ರಾಮದ ಹಿರಿಯರು ಹಾಗೂ ಭಕ್ತರು ದೇವತೆಯ ಜಾತ್ರಾ ಮಹೋತ್ಸವವನ್ನು ಅದ್ಧೂರಿಯಾಗಿ ಆಚರಿಸಬೇಕು ಎಂಬ ನಿರ್ಧಾರ ಕೈಗೊಂಡು, ಏ.14ರಿಂದ 16ರವರೆಗೆ ಜಾತ್ರೆಯನ್ನು ಸಂಭ್ರಮದಿಂದ ಆಚರಿಸಿದರು.

ಮೂರು ದಿನಗಳ ಕಾಲ ಜಾತ್ರಾ ಮಹೋತ್ಸವದಲ್ಲಿ ಆಗಮಿಸಿದ ಭಕ್ತರಿಗೆ ಪ್ರಸಾದದ ವ್ಯವಸ್ಥೆ ಹಮ್ಮಿಕೊಳ್ಳಲಾಗಿತ್ತು. ಏ.15ರಂದು ದೇವಿಯ ಕಟ್ಟೆಯ ಬಳಿ ಡೊಳ್ಳಿನ ಪದಗಳ ಜುಗಲ್‌ಬಂದಿ ಸಾಂಸ್ಕೃತಿಕ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಸಾವಿರಾರು ನಾಗರಿಕರು ಜುಗಲ್‌ಬಂದಿ ಕಾರ್ಯಕ್ರಮವನ್ನು ವೀಕ್ಷಿಸಿ, ದೇವಿಯ ಆಸ್ಥಾನದಲ್ಲಿ ಜಾಗರಣೆ ಕೈಗೊಂಡು ಬೆಳಗಿನ ಜಾವ ಗ್ರಾಮ ದೇವತೆಯ ದರ್ಶನ ಪಡೆದು ಧನ್ಯತೆಯನ್ನು ಮೆರೆದರು.

ಇನ್ಫೋಸಿಸ್ ಪ್ರತಿಷ್ಠಾನ, ಭಾರತೀಯ ವಿದ್ಯಾಭವನ ಸಹಯೋಗದಲ್ಲಿ 7ನೇ ಆವೃತ್ತಿಯ ಕಾರ್ಯಕ್ರಮ

ಸಂಭ್ರಮದ ಪುಲಿಗೆರೆ ಉತ್ಸವಕ್ಕೆ ಕ್ಷಣಗಣನೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಶ್ರೀ ಸೋಮೇಶ್ವರ ದೇವಸ್ಥಾನದಲ್ಲಿ ಮತ್ತೊಮ್ಮೆ 'ಪುಲಿಗೆರೆ ಉತ್ಸವ' ಸಾಂಸ್ಕೃತಿಕ ಹಬ್ಬದ ವಿಜೃಂಭಣೆಗೆ ವೇದಿಕೆ ಸಜ್ಜುಗೊಳ್ಳುತ್ತಿದೆ. ಲಕ್ಷ್ಮೇಶ್ವರದ ಶ್ರೀ ಸೋಮೇಶ್ವರ ದೇವಸ್ಥಾನದಲ್ಲಿ ಇನ್ಫೋಸಿಸ್ ಪ್ರತಿಷ್ಠಾನದ ಸಹಕಾರ ಹಾಗೂ ಭಾರತೀಯ ವಿದ್ಯಾಭವನ ಸಹಯೋಗದಲ್ಲಿ ನಡೆಯುತ್ತಿರುವ 7ನೇ ಆವೃತ್ತಿಯ 'ಪುಲಿಗೆರೆ ಉತ್ಸವ' ಏ.19, 20 ಮತ್ತು 21ರಂದು ಜರುಗಲಿದೆ. ನಾಡಿನ ಪ್ರಸಿದ್ಧ ಕಲಾವಿದರು ತಮ್ಮ ಪ್ರತಿಭೆಯನ್ನು ಪ್ರದರ್ಶಿಸಲಿದ್ದಾರೆ.

3 ದಿನಗಳ ಕಾಲ ನಡೆಯುವ ನೃತ್ಯ-ಸಂಗೀತ-ಚಿತ್ರಕಲಾ ಸಂಭ್ರಮವನ್ನು ಸಾಂಸ್ಕೃತಿಕ ಪರಂಪರೆಯ ಉತ್ಥಾನದ ಧ್ಯೇಯದಿಂದ ರೂಪಿಸಲಾಗಿದ್ದು, ಉತ್ಸವದಲ್ಲಿ ಸುಮಾರು 100ಕ್ಕೂ ಹೆಚ್ಚು ಕಲಾವಿದರು ಪಾಲ್ಗೊಳ್ಳಲಿದ್ದಾರೆ. ಪ್ರಸಿದ್ಧ ಕಲಾ ತಂಡದವರ ವಿವಿಧ ವಾದ್ಯ ವೈಭವಗಳೊಂದಿಗೆ ಅಲಂಕೃತ ಶ್ರೀ ಸೋಮೇಶ್ವರ ದೇವರ ಪಲ್ಲಕ್ಕಿ ಉತ್ಸವ ವಿಜೃಂಭಣೆಯಿಂದ ಜರುಗಲಿದೆ.

ಪುಲಿಗೆರೆ ಉತ್ಸವದಲ್ಲಿ ಮೊದಲ ದಿನ ಏ.19ರಂದು ಶುಕ್ರವಾರ ಬೆಳಿಗ್ಗೆ 6 ಗಂಟೆಗೆ ಭಾರತೀಯ ವಿದ್ಯಾಭವನದ ಜಂಟಿ ನಿರ್ದೇಶಕಿ ನಾಗಲಕ್ಷ್ಮೀ ಕೆ.ರಾವ್ ಮತ್ತು ಶ್ರೀ ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಕಮಿಟಿ ಅಧ್ಯಕ್ಷ ಚಂಬಣ್ಣ ಬಾಳಿಕಾಯಿ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಸ್ಥಳೀಯ ಹಾಗೂ ಸಂಸ್ಥೆಯ ಅನೇಕ ಹಿರಿಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿರಲಿದ್ದಾರೆ.

ಶುಕ್ರವಾರ ಬೆಳಿಗ್ಗೆ 6.10ಕ್ಕೆ ಉದಯ ರಾಗ-1ರಲ್ಲಿ ಖ್ಯಾತ ಕಲಾವಿದ ಸರ್ಫರಾಜ್ ಖಾನ್ ಇವರಿಂದ ಸಾರಂಗಿ ವಾದನ, ಬೆಳಿಗ್ಗೆ 7ಕ್ಕೆ ಖ್ಯಾತ ಹಿಂದುಸ್ಥಾನಿ ಸಂಗೀತ ಕಲಾವಿದೆ ರೇಷ್ಮಾ ಭಟ್ ಅವರಿಂದ ಹಿಂದೂಸ್ಥಾನಿ ಗಾಯನ ಜರುಗುವುದು. ಸಂಜೆ 4ಕ್ಕೆ ಅಲಂಕೃತ ಶ್ರೀ ಸೋಮೇಶ್ವರ ದೇವರ ಪಲ್ಲಕ್ಕಿ ಉತ್ಸವ ಜರುಗಲಿದೆ.

ಶಿಥಿಲಾವಸ್ಥೆಯಲ್ಲಿದ್ದ ಪಟ್ಟಣದ ಶ್ರೀ ಸೋಮೇಶ್ವರ ದೇವಸ್ಥಾವನ್ನು ಡಾ. ಸುಧಾ ನಾರಾಯಣ ಮೂರ್ತಿ ತಮ್ಮದೇ ಪ್ರತಿಷ್ಠಾನದಿಂದ 4.5 ಕೋಟಿ ರೂ. ಖರ್ಚು ಮಾಡಿ ಜೀರ್ಣೋದ್ಧಾರಗೊಳಿಸಿದರು. ಬಳಿಕ ದೇವಸ್ಥಾನದಲ್ಲಿ ಸಾಂಸ್ಕೃತಿಕ ಕಳೆ ತುಂಬಲು 'ಪುಲಿಗೆರೆ ಉತ್ಸವ' ಹೆಸರಿನಲ್ಲಿ ಪ್ರತಿವರ್ಷ ಬೆಂಗಳೂರಿನ ಭಾರತಿ ವಿದ್ಯಾಭವನದ ನೇತೃತ್ವದಲ್ಲಿ ಸಂಗೀತ, ನೃತ್ಯ, ಚಿತ್ರ ಸಂಭ್ರಮದ ಮೂಲಕ ಈ ಭಾಗದ ಜನತೆಗೆ ಭಾರತೀಯ ಕಲೆ, ಸಂಗೀತ, ಶಿಲ್ಪಕಲೆ, ಇತಿಹಾಸ ಪರಂಪರೆ ಉಳಿಸಿ ಬೆಳೆಸುವ ಮಹೋನ್ನತ ಕಾರ್ಯ ಮಾಡುತ್ತಿದ್ದಾರೆ.

ಸಂಜೆಯ ಕಾರ್ಯಕ್ರಮದಲ್ಲಿ ಇನ್ಫೋಸಿಸ್ ಪ್ರತಿಷ್ಠಾನದ ಸಿಎಸ್‌ಆರ್ ವಿಭಾಗದ ವ್ಯವಸ್ಥಾಪಕ ಪ್ರಶಾಂತ ಹೆಗಡೆ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

ಸಂಜೆ 6ಕ್ಕೆ ಸಿದ್ದಾಪುರದ ಕೊಳಗಿ ಕೇಶವ ಹೆಗಡೆ ಮತ್ತು ತಂಡದವರಿಂದ ಯಕ್ಷಗಾನ ಜರುಗಲಿದೆ. ಸಂಜೆ 7ಕ್ಕೆ ಹಿರಿಯ ಗಾಯಕ ಡಾ.ಅಶೋಕ ಹುಗ್ಗಣ್ಣವರ ಅವರಿಂದ ಹಿಂದೂಸ್ಥಾನಿ ಗಾಯನ, 8.30ಕ್ಕೆ ಬೆಂಗಳೂರಿನ ವಿ.ಕಾವ್ಯಾ ಕಾಶಿನಾಥನ್ ಮತ್ತು ಶಶಾಂಕ್ ಕಿರೋಣ ನಾಯರ್ ಅವರಿಂದ ಭರತನಾಟ್ಯ ಪ್ರದರ್ಶನ ನಡೆಯಲಿದೆ.

ಏ.20ರಂದು ಬೆಳಿಗ್ಗೆ 6 ಗಂಟೆಗೆ ಲಕ್ಷ್ಮೇಶ್ವರದ ಖ್ಯಾತ ಕಲಾವಿದ ಕೃಷ್ಣ ಕ್ಷತ್ರಿಯ ಅವರಿಂದ ಶಹನಾಯಿ ವಾದನ, 7 ಗಂಟೆಗೆ ಹುಬ್ಬಳ್ಳಿಯ ಕೃತಿಕಾ ಜಂಗಿನಮಠರಿಂದ ಬಾನ್ಸುರಿ ವಾದನ ನಡೆಯಲಿದೆ. ಸಂಜೆ 6ಕ್ಕೆ ಬೆಂಗಳೂರಿನ ಮನೋಹರ ಪಟವರ್ಧನ ಮತ್ತು ತಂಡದವರಿಂದ ಹಿಂದೂಸ್ಥಾನಿ ಗಾಯನ, 7.30ಕ್ಕೆ ಬೆಂಗಳೂರಿನ ನಂದಿನಿ ಮೆಹ್ತಾ ಮತ್ತು ಕೆ.ಮುರಳಿ ಅವರಿಂದ ಕಥಕ್ ಕಿ ಕಾನಾಕ್ ಜರುಗಲಿದೆ. 8.30ಕ್ಕೆ ಬೆಂಗಳೂರಿನ ಡಾ.ರೇಖಾ ರಾಜು ಮತ್ತು ತಂಡದವರಿಂದ ಮೋಹಿನಿಅಟ್ಟಂ ನೃತ್ಯ ಪ್ರದರ್ಶನ ನಡೆಯಲಿದೆ.

ಏ.21ರ ಬೆಳಿಗ್ಗೆ 6ಕ್ಕೆ ಹುಬ್ಬಳ್ಳಿಯ ಶಶಿಕಲಾ ದಾನಿ ಅವರಿಂದ ಜಲತರಂಗ ವಿಶೇಷ ಕಾರ್ಯಕ್ರಮ, 7 ಗಂಟೆಗೆ ಶಿರಹಟ್ಟಿಯ ಶೃತಿ ರೊಟ್ಟಿ ಜೋಶಿ ಅವರಿಂದ ಹಿಂದೂಸ್ಥಾನಿ ಗಾಯನ ನೆರವೇರಲಿದೆ. ಸಂಜೆ 6ಕ್ಕೆ ಬೆಂಗಳೂರಿನ ಡಾ.ರವೀಂದ್ರ ಗುರುರಾಜ ಕಾಟೋಟಿ ಅವರಿಂದ ಹಾರ್ಮೋನಿಯಂ ಸೋಲೋ, 7.30ಕ್ಕೆ ಬೆಂಗಳೂರಿನ ಅರ್ಚನಾ ಮತ್ತು ಚೇತನಾ ಅವರಿಂದ ಭರತನಾಟ್ಯ, 8.30ಕ್ಕೆ ಬೆಂಗಳೂರಿನ ಅನುಶ್ರೀ ಪದ್ಮನಾಮ ಅವರಿಂದ ಓಡಿಸ್ಸಿ ನೃತ್ಯ ಪ್ರದರ್ಶನ ಜರುಗಲಿದೆ ಎಂದು ಸಂಘಟಕರು ತಿಳಿಸಿದ್ದಾರೆ.

ರಾಮಾಯಣದ ಪ್ರಸಂಗಗಳು ಬದುಕಿಗೆ ಆದರ್ಶ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಶ್ರೀ ಶಂಕರ ಭಾರತಿ ಮಠದಲ್ಲಿ ಬ್ರಹ್ಮವೃಂದದ ವತಿಯಿಂದ ಬುಧವಾರ ಶ್ರೀರಾಮನ ತೊಟ್ಟಿಲೋತ್ಸವ ಕಾರ್ಯಕ್ರಮವನ್ನು ಶ್ರದ್ಧಾ-ಭಕ್ತಿಯಿಂದ ನೆರವೇರಿಸಲಾಯಿತು.

ಶ್ರೀಮಠದಲ್ಲಿ ಸೇರಿದ್ದ ಸುಮಂಗಲೆಯರು ಶ್ರೀರಾಮ ಸ್ವರೂಪಿ ಮೂರ್ತಿಯನ್ನು ತೊಟ್ಟಿಲಲ್ಲಿ ಹಾಕಿ ಭಕ್ತಿಯಿಂದ ತೂಗಿ ರಾಮನಾಮದ ಭಕ್ತಿಗೀತೆ ಹಾಡಿದರು. ಈ ಸಂದರ್ಭದಲ್ಲಿ ಮಾತನಾಡಿದ ವೆ.ಮೂ. ಬಾಲಚಂದ್ರಭಟ್ ಹುಲಮನಿ, ಧರ್ಮ ಸಂಸ್ಥಾಪನೆಗಾಗಿ ಮರ್ಯಾದಾ ಪುರುಷೋತ್ತಮನಾಗಿ ಅವತಾರವೆತ್ತಿದ ಶ್ರೀರಾಮ ಸಾಕ್ಷಾತ್ ದೇವರೇ ಆಗಿದ್ದಾನೆ. ಸೂರ್ಯವಂಶಸ್ಥನಾದ ಶ್ರೀರಾಮನು ಕಾಲಾತೀತ, ಗುಣಾತೀತನಾಗಿದ್ದು, ಶ್ರೀರಾಮನೇ ಮೂಲವಾಗಿರುವ ರಾಮಾಯಣದ ಪ್ರಸಂಗಗಳು ಬದುಕಿಗೆ ಆದರ್ಶವಾಗಿವೆ. ಶ್ರೀರಾಮ ಎಲ್ಲರ ಬದುಕಿಗೂ ಆದರ್ಶ ಮತ್ತು ಪೂಜನೀಯವಾಗಿದ್ದು, ಶ್ರೀರಾಮ ನಾಮ ಜಪದಿಂದ ಕಷ್ಟಗಳು ಪರಿಹಾರವಾಗಿ ಸುಖ-ನೆಮ್ಮದಿಯ ಬದುಕು ನಮ್ಮದಾಗುತ್ತದೆ ಎಂದರು.

ಬ್ರಹ್ಮವೃಂದದ ಅಧ್ಯಕ್ಷ ಗೋಪಾಲ ಪಡ್ನೀಸ್ ಮಾತನಾಡಿ, ಅಯೋಧ್ಯೆ ರಾಮಮಂದಿರ ಉದ್ಘಾಟನೆ ನಿಮಿತ್ತ ಇಲ್ಲಿನ ಬ್ರಾಹ್ಮಣ ಸಮಾಜ ಒಂದು ಕೋಟಿ ರಾಮನಾಮ ತಾರಕ ಮಂತ್ರದ ಜಪಯಜ್ಞವನ್ನು ಯಶಸ್ವಿಯಾಗಿ ನೆರವೇರಿಸಿದ್ದು ಎಲ್ಲರ ಗಮನ ಸೆಳೆಯುವಂತಾಗಿತ್ತು. ಬ್ರಾಹ್ಮಣ ಸಮಾಜದ ಜೊತೆ ಇತರೆ ಎಲ್ಲ ಸಮಾಜ ಬಾಂಧವರು ಅಂದಿನ ರಾಮತಾರಕ ಯಜ್ಞವನ್ನು ಯಶಸ್ವಿಗೊಳಿಸಲು ಸಹಕರಿಸಿದ್ದು, ಅದೇ ರೀತಿ ಇಂದು ಶ್ರೀರಾಮ ನವಮಿಯನ್ನು ಸಂಪ್ರದಾಯದಂತೆ ಆಚರಿಸಲಾಗಿದೆ ಎಂದರು.

ಶ್ರೀರಾಮ ಎಲ್ಲರಿಗೂ ಆದರ್ಶಪ್ರಾಯ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪ್ರಭು ಶ್ರೀರಾಮಚಂದ್ರ ಎಲ್ಲರಿಗೂ ಆದರ್ಶಪ್ರಾಯ ನಾಗಿದ್ದಾನೆ ಎಂದು ಯೋಗ ಶಿಕ್ಷಕ ಪ್ರಕಾಶ ಮದ್ದಿನ ಹೇಳಿದರು.

ಅವರು ಪಟ್ಟಣದ ರೇಣುಕಾ ಯಲ್ಲಮ್ಮ ದೇವಸ್ಥಾನದಲ್ಲಿ ಪತಂಜಲಿ ಯೋಗ ಸಮಿತಿಯಿಂದ ಶ್ರೀರಾಮ ನವಮಿ ನಿಮಿತ್ತ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ರಾಮನ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿ, ರಾಮ ಒಬ್ಬ ಆದರ್ಶ ಪುತ್ರ, ಆದರ್ಶ ರಾಜ, ಆದರ್ಶ ಪತಿಯಾಗಿದ್ದು, ರಾಮ ವಚನ ಪಾಲನೆ, ಪ್ರಜಾಸೇವೆಯ ಬದ್ಧತೆ, ನ್ಯಾಯ ನಿಷ್ಠುರತೆ, ಪ್ರೀತಿ, ಮಮತೆ, ಮಾನವಿಯ ಮೌಲ್ಯಗಳು ನಮಗೆಲ್ಲರಿಗೂ ಆದರ್ಶವಾಗಲಿ, ರಾಮ ದೇಶಕ್ಕೆ ಅಷ್ಟೇ ಅಲ್ಲದೇ ವಿಶ್ವಕ್ಕೇ ಆದರ್ಶಪ್ರಾಯರು ಎಂದರು.

ಪ್ರಕಾಶ ಬಡಿಗೇರ ಸೇರಿದಂತೆ ಯೋಗ ಪಟುಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಅಧಿಕಾರಿಗಳ ಸಂಧಾನ, ಮತದಾನ ಬಹಿಷ್ಕಾರ ಹಿಂಪಡೆದ ವಸತಿರಹಿತ ಕುಟುಂಬಗಳು

ಪ್ರತಿಯೊಬ್ಬರೂ ಕಡ್ಡಾಯವಾಗಿ ಮತದಾನ ಮಾಡಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರದ ನೂರಾರು ವಸತಿರಹಿತ ಕುಟುಂಬಗಳು ಮಾರ್ಚ್ 24ರಂದು ಸಭೆ ನಡೆಸಿ, ತಮ್ಮ ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ಲೋಕಸಭಾ ಚುನಾಚಣೆ ಬಹಿಷ್ಕಾರ ಮಾಡಲು ಎಚ್ಚರಿಕೆ ನೀಡಿದ್ದರು. ಇದನ್ನು ಗಂಭೀರವಾಗಿ ಪರಿಗಣಿಸಿದ ಜಿಲ್ಲಾಡಳಿತ, ಗದಗ ಜಿಲ್ಲಾ ಸ್ಲಂ ಸಮಿತಿಯ ನೇತೃತ್ವದಲ್ಲಿ ವಸತಿ ರಹಿತರ ಸಭೆಯನ್ನು ನಡೆಸಿದ ಅಧಿಕಾರಿಗಳು, ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಮತದಾನ ಮಾಡುವಂತೆ ಮನವೂಲಿಸುವಲ್ಲಿ ಸಫಲರಾಗಿದ್ದಾರೆ.

ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತ ಹಾಗೂ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಪ್ರಶಾಂತ ವರಗಪ್ಪನವರ, ಗದಗ ಜಿಲ್ಲಾ ಉಪವಿಭಾಗೀಯ ಕಚೇರಿಯ ತಹಸೀಲ್ದಾರ ವಿಜಯಲಕ್ಷ್ಮೀ ವಸ್ತ್ರದ, ಗದಗ ಉಪ-ತಹಸೀಲ್ದಾರ ಕೊಣ್ಣೂರ ಮತ್ತು ನಗರಸಭೆ ವ್ಯವಸ್ಥಾಪಕರಾದ ಪರುಶರಾಮ ಶೇರಖಾನೆ ಸಮ್ಮುಖದಲ್ಲಿ ವಸತಿರಹಿತ ಕುಟುಂಬಗಳು ಸಭೆಯನ್ನು ನಡೆಸಿ, ತಮ್ಮ ಬೇಡಿಕೆಗಳನ್ನು ಅಧಿಕಾರಿಗಳ ಗಮನಕ್ಕೆ ತಂದರು.

ಈ ಸಂದರ್ಭದಲ್ಲಿ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ್ ಮಾನ್ವಿ, ಗದಗ ಜಿಲ್ಲಾ ಡಿಎಸ್‌ಎಸ್ ಸಂಚಾಲಕ ವೆಂಕಟೇಶಯ್ಯ, ಮುಖಂಡರಾದ ಬಸವರಾಜ ಪೂಜಾರ, ರವಿಕುಮಾರ ಬೆಳಮಕರ, ಅಶೋಕ ಕುಸಬಿ, ಮೆಹರುನಿಸಾ ಡಂಬಳ, ಮೈಮುನ ಬೈರಕದಾರ, ನಜಮುನಿಸಾ ಮುರಗೋಡ, ವಿಶಾಲಕ್ಷಿ ಹಿರೇಗೌಡ್ರ, ವಂದನಾ ಶ್ಯಾವಿ, ಸುಶೀಲಮ್ಮ ಗೋಂದಾರ, ಮರ್ದಾನಬಿ ಬಳ್ಳಾರಿ, ನಗೀನಾ ಯಲಿಗಾರ, ಇಬ್ರಾಹಿಮ ಮುಲ್ಲಾ, ಶಂಕ್ರಪ್ಪ ಮೂಲಿಮನಿ, ದುರ್ಗಪ್ಪ ಮಣ್ಣವಡ್ಡರ, ದಾವಲಬಿ ಕೌತಾಳ, ಮಕ್ತುಮಸಾಬ ಮುಲ್ಲಾನವರ, ಬಾಷಾಸಾಬ ಡಂಬಳ, ಸಲೀಮ ಬೈರಕದಾರ ಮುಂತಾದವರಿದ್ದರು.

ಈ ಸಂದರ್ಭದಲ್ಲಿ ನಗರಸಭೆ ಪೌರಾಯುಕ್ತ ಪ್ರಶಾಂತ ವರಗಪ್ಪನವರ ಮಾತನಾಡಿ, ವಸತಿ ರಹಿತರ ಹಾಗೂ ಸ್ಲಂ ನಿವಾಸ

ಪತ್ರಿಕಾಗೋಷ್ಠಿಯಲ್ಲಿ ರಾಜ್ಯ ಜೆಡಿಎಸ್ ಕಾರ್ಯಾಧ್ಯಕ್ಷ ಹನುಮಂತಪ್ಪ ಆಲ್ಕೋಡ

ಕಾಂಗ್ರೆಸ್ ಸರಕಾರ ನುಡಿದಂತೆ ನಡೆದಿಲ್ಲ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ತಮ್ಮದು ನುಡಿದಂತೆ ನಡೆದ ಸರಕಾರ, ವಿಧಾನಸಭೆ ಚುನಾವಣೆಯಲ್ಲಿ ನಾವು ನೀಡಿದ ಗ್ಯಾರಂಟಿಗಳನ್ನು ಕಾರ್ಯರೂಪಕ್ಕೆ ತರುವ ಮೂಲಕ ನುಡಿದಂತೆ ನಡೆದಿದ್ದೇವೆ ಎಂದು ಹೇಳುತ್ತ ನಡೆದಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ. ಶಿವಕುಮಾರ ಮತ್ತು ಅವರ ಸಚಿವ ಸಂಪುಟದವರು ಹೇಳುತ್ತಿರುವ ಮಾತುಗಳೆಲ್ಲ ಸಂಪೂರ್ಣ ಸುಳ್ಳು. ಜನತೆ ಇವುಗಳನ್ನು ನಂಬಿ ಈ ಲೋಕಸಭಾ ಚುನಾವಣೆಯಲ್ಲಿಯೂ ಅವರಿಗೆ ಮತ ನೀಡಿ ಮತ್ತೆ ಮೋಸ ಹೋಗಬಾರದು ಎಂದು ರಾಜ್ಯ ಜೆಡಿಎಸ್ ಕಾರ್ಯಾಧ್ಯಕ್ಷ ಹನುಮಂತಪ್ಪ ಆಲ್ಕೋಡ್ ಹೇಳಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಕಾಂಗ್ರೆಸ್‌ನ ಗ್ಯಾರಂಟಿಗಳು ರಾಜ್ಯದ ಇನ್ನೂ ಶೇ.60ರಷ್ಟು ಜನರಿಗೆ ತಲುಪಿಲ್ಲ. ಇಂದು ಪದವಿ ಮುಗಿಸಿ ಮನೆಗೆ ಹೋಗುವವನಿಗೆ ಹಣ ಕೊಡುವಂತಿದ್ದರೆ ಈಗಾಗಲೇ ಪದವಿ ಮುಗಿಸಿ ಅದೆಷ್ಟೋ ವರ್ಷಗಳನ್ನು ಕಳೆದು ಕೆಲಸವಿಲ್ಲದೆ ಕುಳಿತಿರುವ ನಿರುದ್ಯೋಗಿ ಪದವೀಧರರಿಗೆ ಇವರೇನು ಹೇಳುತ್ತಾರೆ ಎಂದರು.

ಪ್ರಧಾನಿ ನರೇಂದ್ರ ಮೋದಿಯವರಿಂದ ಮಾತ್ರ ಈ ದೇಶ ಅಭಿವೃದ್ಧಿಯಾಗಲು ಸಾಧ್ಯ ಎಂಬ ವಿಷಯವನ್ನು ಮನಗಂಡು ಜೆಡಿಎಸ್ ಪಕ್ಷದ ವರಿಷ್ಠ ಎಚ್.ಡಿ. ದೇವೇಗೌಡರು ಎನ್‌ಡಿಎಯೊಂದಿಗೆ ಮೈತ್ರಿ ಮಾಡಿಕೊಂಡಿದ್ದಾರೆ. ಬೊವಮ್ಮಾಯಿಯವರನ್ನು ಆರಿಸಿ ತಂದು ಮತ್ತೊಮ್ಮೆ ಮೋದಿ ಪ್ರಧಾನಿಯಾಗುವಂತೆ ನೋಡಿಕೊಳ್ಳಬೇಕೆಂದು ಎರಡೂ ಪಕ್ಷಗಳ ಕಾರ್ಯಕರ್ತರಿಗೆ ಹನುಮಂತಪ್ಪ ಮನವಿ ಮಾಡಿದರು.

ಈಶ್ವರಪ್ಪ ಪಕ್ಷೇತರರಾಗಿ ಸ್ಪರ್ಧಿಸಿರುವುದು ಫಲಿತಾಂಶದ ಮೇಲೆ ಏನಾದರೂ ಪರಿಣಾಮ ಬೀರುತ್ತದೆಯಾ? ಎಂಬ ಪ್ರಶ್ನೆಗೆ ಉತ್ತರಿಸಿದ ಹನುಮಂತಪ್ಪ, ಪ್ರತಿಯೊಂದು ಪಕ್ಷವೂ ತನ್ನದೇ ಆದ ಕಾರ್ಯಕರ್ತರ ಪಡೆಯನ್ನು ಹೊಂದಿರುತ್ತದೆ. ಅಸಮಾಧಾನದಿಂದಲೋ, ಇತರೆ ಕಾರಣಗಳಿಗಾಗಿಯೋ ಪಕ್ಷ ಬಿಟ್ಟು ಹೋದವರು ಅದೆಷ್ಟು ಪೆಟ್ಟು ತಿಂದಿದ್ದಾರೆ ಎಂಬುದು ಎಲ್ಲರಿಗೂ ಗೊತ್ತಿರುವ ವಿಚಾರ. ಹೀಗಾಗಿ ಫಲಿತಾಂಶದ ಮೇಲೆ ಈಶ್ವರಪ್ಪನವರ ಸ್ಪರ್ಧೆ ಏನೂ ಪರಿಣಾಮ ಬೀರದೆಂದರು.

ಮಂಡ್ಯದಲ್ಲಿ ಜೆಡಿಎಸ್‌ನ ಕುಮಾರಸ್ವಾಮಿಯವರ ಸ್ಪರ್ಧೆಯಿಂದ ಈಗಿನ ಸಂಸದೆ ಸುಮಲತಾ ಅವರಿಗೆ ಅನ್ಯಾಯವಾದಂತಾಗಿಲ್ಲವೆ ಎಂಬ ಪ್ರಶ್ನೆಗೆ ಉತ್ತರಿಸಿದ ಹನುಮಂತಪ್ಪ, ಇದು ಎನ್‌ಡಿಎ ಕೂಟ ತೆಗೆದುಕೊಂಡ ನಿರ್ಧಾರ. ಇದರಿಂದ ಸುಮಲತಾ ಅವರಿಗೆ ಯಾವುದೇ ಅನ್ಯಾಯವಾಗಿಲ್ಲ ಎಂಬುದು ನನ್ನ ಭಾವನೆ. ಅವರ ಪಕ್ಷ ಮುಂದೆ ಅವರಿಗೆ ಖಂಡಿತ ನ್ಯಾಯ ಒದಗಿಸುತ್ತದೆ ಎನ್ನುವ ವಿಶ್ವಾಸ ತಮ್ಮದು ಎಂದರು.

ಮತದಾರರು ಈ ಲೋಕಸಭಾ ಚುನಾವಣೆಯಲ್ಲಿ ತಮ್ಮ ಆಯ್ಕೆಯನ್ನು ಈಗಾಗಲೇ ಮಾಡಿಕೊಂಡಿದ್ದಾರೆ. ಅವರೆಲ್ಲರ ಆಯ್ಕೆ ರಾಜ್ಯದಲ್ಲಿ ಎನ್‌ಡಿಎ ಮೈತ್ರಿಕೂಟವನ್ನು ಗೆಲ್ಲಿಸುವದಾಗಿದೆ. ಹೀಗಾಗಿ ಈ ಸಾರೆ ರಾಜ್ಯದಲ್ಲಿ ಎಲ್ಲ ಸ್ಥಾನಗಳೂ ಎನ್‌ಡಿಎ ಮೈತ್ರಿ ಕೂಟದ ಪರವಾಗಿರಲಿವೆ ಎಂದು ಅಲ್ಕೋಡ ಹನುಮಂತಪ್ಪ ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಪ.ಪಂ ಸದಸ್ಯ ಕುಮಾರಸ್ವಾಮಿ ಕೋರಧಾನ್ಯಮಠ, ಧುರೀಣರಾದ ಶರಣಪ್ಪ ರೇವಡಿ, ಗದಗ ಜಿಲ್ಲಾ ಜೆಡಿಎಸ್ ಉಪಾಧ್ಯಕ್ಷ ವೀರಪ್ಪ ಜೀರ್ಲ, ತಾಲೂಕಾ ಉಪಾಧ್ಯಕ್ಷ ರಕ್ಷಿತಗೌಡ ಪಾಟೀಲ ಇನ್ನೂ ಮುಂತಾದವರಿದ್ದರು.

ಅಗಲಿದ ನಟ ದ್ವಾರಕೀಶ್‌ಗೆ ಶ್ರದ್ಧಾಂಜಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಅಖಿಲ ಕರ್ನಾಟಕ ಡಾ. ರಾಜ್‌ಕುಮಾರ್ ಅಭಿಮಾನಿಗಳ ಸಂಘಗಳ ಒಕ್ಕೂಟ, ಡಾ. ಶಿವರಾಜ್‌ಕುಮಾರ ಅಭಿಮಾನಿಗಳ ಸಂಘ, ರಾಜರತ್ನ ಪುನೀತ್ ರಾಜ್‌ಕುಮಾರ ಅಭಿಮಾನಿಗಳ ಸಂಘಗಳ ಗದಗ ಜಿಲ್ಲಾ ಘಟಕದ ವತಿಯಿಂದ ಕನ್ನಡ ಚಲನಚಿತ್ರದ ಖ್ಯಾತ ನಟ, ನಿರ್ಮಾಪಕ, ನಿರ್ದೇಶಕರೂ ದ್ವಾರಕೀಶ ಅವರ ನಿಧನಕ್ಕೆ ನಗರದ ಗಾಂಧಿ ಸರ್ಕಲ್‌ನಲ್ಲಿ ಕ್ಯಾಂಡಲ್ ಬೆಳಗಿಸುವ ಮೂಲಕ ಭಾವಪೂರ್ಣ ಶ್ರದ್ಧಾಂಜಲಿಯನ್ನು ಸಲ್ಲಿಸಿದರು.

ಈ ಸಂದರ್ಭದಲ್ಲಿ ಸಂಘದ ಅಧ್ಯಕ್ಷ ವಿಠ್ಠಲ ಪರಾಪೂರ, ಉಪಾಧ್ಯಕ್ಷ ನಾಗರಾಜ ಗುತ್ತಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಲ್ಲಿಕಾರ್ಜುನ ಸಂಗಾಪೂರ, ಖಜಾಂಚಿ ಗಣೇಶ ಹುಬ್ಬಳ್ಳಿ, ಉಮೇಶ ಅಕ್ಕಿ, ಮನು ಆದೋನಿ, ಮಂಜು ಹೊಸಮನಿ, ಕೃಷ್ಣಾ ಕಲ್ಮನಿ ಮುಂತಾದವರು ಉಪಸ್ಥಿತರಿದ್ದರು.

ಬರ ನಿರ್ವಹಣೆ ಸಮರ್ಪಕವಾಗಿ ನಿರ್ವಹಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಪ್ರಸ್ತುತ ಜಿಲ್ಲೆಯಲ್ಲಿ ಬರಗಾಲವಿದ್ದು, ತಾಲೂಕಿನಲ್ಲಿ ಕುಡಿಯುವ ನೀರು ಮತ್ತು ಜಾನುವಾರುಗಳಿಗೆ ಮೇವಿನ ಸ್ಥಿತಿ-ಗತಿಯ ಜೊತೆಗೆ ಬರನಿರ್ವಹಣೆಯನ್ನು ಸಮರ್ಪಕವಾಗಿ ನಿರ್ವಹಿಸಬೇಕು ಎಂದು ಜಿ.ಪಂ ಉಪ ಕಾರ್ಯದರ್ಶಿ ಸಿ.ಬಿ. ದೇವರಮನಿ ಪಿಡಿಓಗಳಿಗೆ ಸೂಚಿಸಿದರು.

ತಾಲೂಕು ಪಂಚಾಯಿತಿಯಲ್ಲಿ ಜರುಗಿದ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅವರು ಮಾತನಾಡಿದರು.

ತಾಲೂಕಿನಲ್ಲಿ ಕುಡಿಯುವ ನೀರು, ಮೇವು ಪೂರೈಕೆ, ಬರ ನಿರ್ವಹಣೆ ಸಂಬಂಧ ಯಾವುದೇ ದೂರುಗಳಿಗೆ ಆಸ್ಪದ ನೀಡದಂತೆ ಅಧಿಕಾರಿಗಳು ಕಾರ್ಯನಿರ್ವಹಿಸಬೇಕು. ಕುಡಿಯುವ ನೀರಿನ ತೊಂದರೆಗೊಳಗಾದ ಗ್ರಾಮಗಳನ್ನು ಈಗಾಗಲೇ ಗುರುತಿಸಿದ್ದು, ಯಾವುದೇ ಕಾರಣಕ್ಕೂ ಗದಗ ತಾಲೂಕಿನ ಗ್ರಾಮೀಣ ಭಾಗದ ಸಾರ್ವಜನಿಕರಿಗೆ ಮತ್ತು ಜಾನುವಾರುಗಳಿಗೆ ಕುಡಿಯುವ ನೀರಿನ ತೊಂದರೆಯಾಗದಂತೆ ಮುಂಜಾಗ್ರತಾ ಕ್ರಮ ವಹಿಸಬೇಕು ಎಂದು ತಿಳಿಸಿದರು.

ಅಗತ್ಯ ಬಿದ್ದಲ್ಲಿ ಟ್ಯಾಂಕರ್ ಹಾಗೂ ಖಾಸಗಿ ಬೋರ್‌ವೆಲ್‌ಗಳ ಮೂಲಕ ಸರ್ಕಾರದ ಮಾರ್ಗಸೂಚಿಗಳನ್ನು ಪಾಲಿಸಿ ಕುಡಿಯುವ ನೀರು ಪೂರೈಕೆಗೆ ಮುಂದಾಗಬೇಕು. ಜಾನುವಾರುಗಳಿಗೆ ಮೇವಿನ ಕೊರತೆಯಾಗದಂತೆ ಮೇವು ಬ್ಯಾಂಕ್‌ಗಳಲ್ಲಿ ಸಮರ್ಪಕ ಮೇವಿನ ದಾಸ್ತಾನು ಮಾಡಿಟ್ಟುಕೊಳ್ಳುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸಭೆಯಲ್ಲಿ ಆದೇಶಿಸಿದರು.

ಗ್ರಾಮೀಣ ಭಾಗದ ಜನರಿಗೆ ಕುಡಿಯುವ ನೀರಿನ ವ್ಯವಸ್ಥೆ, ಜಾನುವಾರುಗಳಿಗೆ ಮೇವು, ಟಾಸ್ಕ್‌ಫೋರ್ಸ್ ರಚನೆ ಹಾಗೂ 2024ರ ಲೋಕಸಭಾ ಚುನಾವಣೆ ಕುರಿತು ಮಾಹಿತಿ ಪಡೆದರು.

ಗದಗ ತಹಸೀಲ್ದಾರ್ ಶ್ರೀನಿವಾಸ್ ಕುಲಕರ್ಣಿ ಮಾತನಾಡಿ, ಏಪ್ರಿಲ್ 19ರಂದು ರಾಜ್ಯ ಚುನಾವಣೆ ಆಯೋಗದಿಂದ ವೀಕ್ಷಕರು ಆಗಮಿಸುತ್ತಿದ್ದು, ಕಡ್ಡಾಯವಾಗಿ ಪ್ರತಿ ಮತದಾನ ಕೇಂದ್ರಗಳಲ್ಲಿ ಮೂಲಭೂತ ಸೌಕರ್ಯ (ಎ.ಎಮ್.ಎಫ್), ಮತಗಟ್ಟೆ ಸಂಖ್ಯೆ ಕಲ್ಪಿಸಲು ಪಂಚಾಯತ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚಿಸಿದರು.

ಬರ ನಿರ್ವಹಣೆ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಹೇಶಕುಮಾರ ವಾಗಿ

ಅಧಿಕಾರಿಗಳು ಎಚ್ಚರಿಕೆಯಿಂದ ಕೆಲಸ ನಿರ್ವಹಿಸಿ

■ ವಿಜಯಸಾಕ್ಷಿ ಸುದ್ದಿ, ರೋಣ

ತಾಲೂಕಿನ ಯಾವುದೇ ಗ್ರಾಮ ಹಾಗೂ ಪಟ್ಟಣಗಳಲ್ಲಿ ಕುಡಿಯುವ ನೀರು ಸೇರಿದಂತೆ ಜಾನುವಾರುಗಳಿಗೆ ಮೇವಿನ ಕೊರತೆಯಾಗದಂತೆ ಅಧಿಕಾರಿಗಳು ಹಾಗೂ ಗ್ರಾ.ಪಂ ಪಿಡಿಓಗಳು ನಿಗಾ ವಹಿಸಬೇಕು ಎಂದು ನೋಡಲ್ ಅಧಿಕಾರಿ ಮಹೇಶಕುಮಾರ ವಾಗಿ ಹೇಳಿದರು.

ಅವರು ಬುಧವಾರ ತಾ.ಪಂ ಸಭಾಭವನದಲ್ಲಿ ಜರುಗಿದ ಬರ ನಿರ್ವಹಣೆ ಪ್ರಗತಿ ಪರಿಶೀಲನಾ ಸಭೆಯ ನೇತೃತ್ವ ವಹಿಸಿ ಮಾತನಾಡಿದರು.

ರೋಣ ತಾಲೂಕಿನ ಎಲ್ಲ ಗ್ರಾಮಗಳು ಹಾಗೂ ಶಹರಗಳಲ್ಲಿ ಸಂಪೂರ್ಣ ಮಳೆಯಾಗುವ ತನಕ ಅಧಿಕಾರಿಗಳು ಹಾಗೂ ಪಿಡಿಓಗಳು ಎಚ್ಚರಿಕೆಯಿಂದ ಕೆಲಸ ನಿರ್ವಹಿಸಬೇಕು. ಮುಖ್ಯವಾಗಿ, ಕುಡಿಯುವ ನೀರಿನ ಸಮಸ್ಯೆ ಹೊಂದಿರುವ ಗ್ರಾಮಗಳ ಬಗ್ಗೆ ಪಿಡಿಓಗಳು ಸಭೆಗೆ ಮಾಹಿತಿ ನೀಡಬೇಕು. ಅಂದಾಗ ಮಾತ್ರ ಸಮಸ್ಯೆ ನಿವಾರಿಸಲು ಸಾಧ್ಯವಾಗುತ್ತದೆ ಎಂದು ಸಭೆಗೆ ವಿವರಿಸಿದರು.

ಈ ಸಂಧರ್ಭದಲ್ಲಿ ಹಿರೇಹಾಳ, ಬೆಳವಣಕಿ ಗ್ರಾ.ಪಂಗಳ ಪಿಡಿಓಗಳು ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯಿಲ್ಲದಿದ್ದರೂ ಸಹ ನೀರು ಪೂರೈಕೆ ಮಾಡುವ ಪೈಪ್‌ಲೈನ್‌ಗಳ ಕೊರತೆಯಾಗಿದ್ದು, ಇದನ್ನು ಸರಿಪಡಿಸಲು ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳಿಗೆ ತಿಳಿಸಲಾಗಿದೆ ಎಂದರು. ಆಗ ಮಧ್ಯ ಪ್ರವೇಶಿಸಿದ ಆರ್‌ಡಬ್ಲುಎಸ್ ಇಇ ಜಗದೀಶ ಮಡಿವಾಳ, ಅನುದಾನದ ಕೊರತೆಯಿದ್ದ ಹಿನ್ನೆಲೆಯಲ್ಲಿ ಕಾಮಗಾರಿ ಕೈಗೆತ್ತಿಕೊಂಡಿಲ್ಲ. ತತಕ್ಷಣ ಏಜೆನ್ಸಿಗಳ ಮೂಲಕ ಕಾಮಗಾರಿಯನ್ನು ನಡೆಸಲಾಗುವುದು ಎಂದರು.

ಜಿಗಳೂರ ಕೆರೆಯಲ್ಲಿ ನೀರು ಇರುವುದರಿಂದ ಸದ್ಯದ ಸ್ಥಿತಿಯಲ್ಲಿ ರೋಣ ಪುರಸಭೆಯ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಸಮಸ್ಯೆಯಿಲ್ಲ ಎಂದು ಮುಖ್ಯಾಧಿಕಾರಿ ಕುಲಕರ್ಣಿ ಸಭೆಗೆ ಮಾಹಿತಿ ನೀಡಿದರು.

> ಕುಡಿಯುವ ನೀರು ಸಂಗ್ರಹ ಟ್ಯಾಂಕರ್‌ಗಳನ್ನು ಶುಚಿಗೊಳಿಸಬೇಕು. ನೀರು ಪೂರೈಕೆ ಮಾಡುವ ಪೈಪ್‌ಲೈನ್‌ಗಳ ಬಗ್ಗೆ ತೀವ್ರ ನಿಗಾ ವಹಿಸಬೇಕು. ಸ್ವಚ್ಛತೆ ಬಗ್ಗೆ ಹೆಚ್ಚಿನ ಕಾಳಜಿ ವಹಿಸಬೇಕು. ಯಾವುದೇ ರೋಗಗಳು ಹರಡದಂತೆ ಮುನ್ನಚ್ಚೆರಿಕೆಯನ್ನು ಅಧಿಕಾರಿಗಳು, ಪಿಡಿಓಗಳು ವಹಿಸಬೇಕು.
>
> – ಮಹೇಶಕುಮಾರ ವಾಗಿ.
> ನೋಡಲ್ ಅಧಿಕಾರಿ, ರೋಣ.

ಅಬ್ಬಿಗೇರಿ, ಜಕ್ಕಲಿ, ಕುರಹಟ್ಟಿ, ಹೊಳೆಮಣ್ಣೂರ, ಹೊಳೆಆಲೂರ ಗ್ರಾ.ಪಂ ಪಿಡಿಓಗಳು ಸಹ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯಿಲ್ಲ ಎಂದು ನೋಡಲ್ ಅಧಿಕಾರಿಗಳಿಗೆ ಸ್ಪಷ್ಟಪಡಿಸಿದರು.

ತಹಸೀಲ್ದಾರ್ ನಾಗರಾಜ ಕೆ, ತಾ.ಪಂ ಇಒ ಎಸ್.ಕೆ. ಇನಾಮದಾರ, ಎಡಿ ರಿಯಾಜ್ ಖತೀಬ ಉಪಸ್ಥಿತರಿದ್ದರು.

ಶ್ರೀರಾಮ ಎಲ್ಲರ ಬದುಕಿನ ಆದರ್ಶ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಸೊಪ್ಪಿನಕೇರಿ ಓಣಿಯಲ್ಲಿ ಶ್ರೀರಾಮ ನವಮಿ ನಿಮಿತ್ತ ಬುಧವಾರ ಶ್ರೀರಾಮನ ಭಾವಚಿತ್ರಕ್ಕೆ ಪೂಜೆ ಸಲ್ಲಿಸಲಾಯಿತು.

ಈ ವೇಳೆ ಹಾವಳಿ ಆಂಜನೇಯ ದೇವಸ್ಥಾನದ ಅರ್ಚಕ ಮುರಘೇಂದ್ರಸ್ವಾಮಿ ಹಿರೇಮಠ ಮಾತನಾಡಿ, ಶ್ರೀರಾಮ ಕೇವಲ ವ್ಯಕ್ತಿಯಲ್ಲ, ಪ್ರತಿಯೊಬ್ಬರ ಬದುಕಿನ ಆದರ್ಶವಾಗಿದ್ದಾರೆ. ಭಕ್ತಿ, ಶ್ರದ್ಧೆ, ಸತ್ಯ, ಶಾಂತಿ, ಪ್ರೀತಿ, ಧರ್ಮ, ಸಂಸ್ಕಾರ, ಮಾನವೀಯತೆ, ಕರ್ತವ್ಯಪ್ರಜ್ಞೆಗಳನ್ನು ರೂಢಿಸಿಕೊಂಡು ಸಾರ್ಥಕ ಜೀವನ ಹೊಂದಬೇಕು ಎಂಬುದನ್ನು ಸಾಕ್ಷೀಕರಿಸಿದ್ದಾನೆ. ಕುಟುಂಬ, ಸಮಾಜ, ದೇಶಕ್ಕಾಗಿ ಬದುಕುವ ಮೂಲಕ ಜೀವನ ಸಾರ್ಥಕಪಡಿಸಿಕೊಳ್ಳಬೇಕು ಎಂದರು.

ಈ ವೇಳೆ ಈರಣ್ಣ ಮುಳಗುಂದ, ವಿರೇಶ ಚಿಂಚಲಿ, ಈರಣ್ಣ ಪೂಜಾರ, ಅರುಣ ಮೆಕ್ಕಿ, ಅಮಿತ ಗುಡಗೇರಿ, ಶಿವು ಮೆಕ್ಕಿ, ಆದೇಶ ಸವಣೂರ, ಸುನೀಲ ಮುಳಗುಂದ, ಯಶವಂತ ಶಿರಹಟ್ಟಿ, ಸೋಮು ಗೌರಿ, ಕುಮಾರ ಕಣವಿ, ವೈಭವ ತಿರುಮಲೆ, ಬಾಲಾಜಿ ಕಲಾಲ್, ಈರಣ್ಣ ಮೆಣಸಿನಕಾಯಿ, ದುಂಡೇಶ ಸವಣೂರ, ಸೋಮು ನರೇಗಲ್, ನೀಲೇಶ ಹುಳಕನವರ ಸೇರಿ ಹಲವರಿದ್ದರು.

ಚುನಾವಣೆ ಪ್ರಜಾಪ್ರಭುತ್ವದ ದೊಡ್ಡ ಹಬ್ಬ

■ ವಿಜಯಸಾಕ್ಷಿ ಸುದ್ದಿ, ಗದಗ

ನಮ್ಮ ಸಂವಿಧಾನವು ಸಮಾನತೆಯ ಹಕ್ಕು, ಸ್ವಾತಂತ್ರ್ಯದ ಹಕ್ಕು, ಶೋಷಣೆಯ ವಿರುದ್ಧದ ಹಕ್ಕು, ಧಾರ್ಮಿಕ ಸ್ವಾತಂತ್ರ್ಯದ ಹಕ್ಕು, ಸಾಂಸ್ಕೃತಿಕ ಮತ್ತು ಶೈಕ್ಷಣಿಕ ಹಕ್ಕುಗಳು ಮತ್ತು ಸಾಂವಿಧಾನಿಕ ಪರಿಹಾರಗಳ ಹಕ್ಕುಗಳನ್ನು ಭಾರತೀಯರ ನಾಗರಿಕರಿಗೆ ಹೇಗೆ ನೀಡಿದೆಯೋ ಅದೇ ರೀತಿ ಸಂವಿಧಾನವು ಮತ ಚಲಾಲಿಸುವ ಹಕ್ಕನ್ನು ಪ್ರತಿಯೊಬ್ಬರಿಗೂ ನೀಡಿದೆ. ಚುನಾವಣೆ ಪ್ರಜಾಪ್ರಭುತ್ವದ ಅತಿ ದೊಡ್ಡ ಹಬ್ಬವಾಗಿದ್ದು, ಮತದಾನ ಮಾಡಿ ಈ ಹಬ್ಬವನ್ನು ಅದ್ದೂರಿಯಾಗಿ ಆಚರಿಸಬೇಕೆಂದು ರೊ. ಶ್ರೀಧರ ಸುಲ್ತಾನಪೂರ ಕರೆ ನೀಡಿದರು.

ರೋಟರ್ಯಾಕ್ಟ್ ಕ್ಲಬ್ ಆಫ್ ಜೆ.ಟಿ. ಕಾಲೇಜ್ ಬಿಸಿಎ & ಬಿಬಿಎ ಹಾಗೂ ರೋಟರಿ ಸಂಸ್ಥೆ ಗದಗ-ಬೆಟಗೇರಿಯು ಜೆ.ಟಿ. ಕಾಲೇಜಿನಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಜೆ.ಟಿ. ಕಾಲೇಜ್ ಬಿಸಿಎ & ಬಿಬಿಎ ಸಂಯೋಜಕ ಸುದೀಪ ಕುಂದಗೋಳ, ತಾವು ಮತದಾನ ಮಾಡುವುದರ ಜೊತೆಗೆ ತಮ್ಮ ಕುಟುಂಬದಲ್ಲಿನ ಸದಸ್ಯರು ಹಾಗೂ ತಮ್ಮ ಮಿತ್ರರಿಗೆ ಮತದಾನ ಮಾಡಲು ಪ್ರೋತ್ಸಾಹಿಸಬೇಕೆಂದು ವಿದ್ಯಾರ್ಥಿಗಳಿಗೆ ತಿಳಿಸಿದರು.

ಕಾರ್ಯಕ್ರಮದಲ್ಲಿ ರೋಟ-ರ್ಯಾಕ್ಟ್ ಕ್ಲಬ್ ಆಫ್ ಜೆ.ಟಿ. ಕಾಲೇಜ್ ಬಿಸಿಎ & ಬಿಬಿಎ ಅಧ್ಯಕ್ಷ ವಿಶ್ವಾಸ ಕೊಪ್ಪಳ, ಕಾರ್ಯದರ್ಶಿ ವಿರೇಂದ್ರ ಚೆನ್ನಪ್ಪನ್ನವರ, ರೋಟರಿ ಸಂಸ್ಥೆಯ ಅಧ್ಯಕ್ಷ ರೊ. ಚಂದ್ರಮೌಳಿ ಜಾಲಿ, ಕಾರ್ಯದರ್ಶಿ ವೀಣಾ ತಿರ್ಲಾಪೂರ, ಸದಸ್ಯರಾದ ರೊ. ಅಕ್ಷಯ್ ಶೆಟ್ಟಿ, ರೊ. ಶಿವಾಚಾರ್ಯ ಹೊಸಳ್ಳಿಮಠ ಮುಂತಾದವರು ಉಪಸ್ಥಿತರಿದ್ದರು.

ದ್ವಿತೀಯ ಪಿಯುಸಿ ಪರೀಕ್ಷೆ-2ರ ಪೂರ್ವಭಾವಿ ಸಭೆಯಲ್ಲಿ ಜಿಲ್ಲಾಧಿಕಾರಿ ಸೂಚನೆ

ವ್ಯವಸ್ಥಿತವಾಗಿ ಪರೀಕ್ಷೆ ನಡೆಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ದ್ವಿತೀಯ ಪಿಯುಸಿ ಪರೀಕ್ಷೆ-2 ಅಂತಿಮ ವೇಳಾಪಟ್ಟಿ ಈಗಾಗಲೇ ಪ್ರಕಟವಾಗಿದ್ದು, ಇದೇ ಏಪ್ರಿಲ್ 29ರಿಂದ ಪರೀಕ್ಷೆ ಆರಂಭವಾಗಲಿದೆ. ಆ ನಿಟ್ಟಿನಲ್ಲಿ ಪರೀಕ್ಷೆ ಸಂಬಂಧ ಅಗತ್ಯ ಸಿದ್ಧತೆ ಮಾಡಿಕೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಸೂಚಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿಯ ನಿರ್ದೇಶನದಂತೆ ದ್ವಿತೀಯು ಪಿ.ಯು.ಸಿ.-2 ಪರೀಕ್ಷೆಯನ್ನು ನಡೆಸಬೇಕು. ಪರೀಕ್ಷಾ ಕೇಂದ್ರಗಳಲ್ಲಿ ಸಿ.ಸಿ ಟಿವಿ ಅಳವಡಿಸುವುದು, ವೆಬ್ ಕಾಸ್ಟಿಂಗ್ ವ್ಯವಸ್ಥೆ ಮಾಡುವುದು ಸೇರಿದಂತೆ ವ್ಯವಸ್ಥಿತವಾಗಿ ಪರೀಕ್ಷೆ ನಡೆಸಲು ಕ್ರಮ ಕೈಗೊಳ್ಳುವಂತೆ ಪ.ಪೂ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಿಗೆ ನಿರ್ದೇಶನ ನೀಡಿದರು.

ಪರೀಕ್ಷೆಯ ಗಂಭೀರತೆಯನ್ನು ತಿಳಿಯಬೇಕು. ಯಾವುದೇ ಗೊಂದಲಕ್ಕೆ ಅವಕಾಶ ಮಾಡದೇ ಪರೀಕ್ಷೆಯನ್ನು ಸುಸೂತ್ರವಾಗಿ ನಡೆಸಬೇಕು. ಪರೀಕ್ಷಾ ಕೇಂದ್ರಗಳಲ್ಲಿ ಕುಡಿಯುವ ನೀರು, ಗಾಳಿ, ಬೆಳಕು ವ್ಯವಸ್ಥೆ ಇರಬೇಕು. ಪರೀಕ್ಷಾ ಸಂದರ್ಭದಲ್ಲಿ ನಿರಂತರ ವಿದ್ಯುತ್ ಸಂಪರ್ಕ ಇರಬೇಕು. ಈ ಬಾರಿ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಗದಗ ಜಿಲ್ಲೆ ರಾಜ್ಯದಲ್ಲಿ ಕೊನೆಯ ಸ್ಥಾನ ಪಡೆದಿರುವುದು ಬೇಸರ ತಂದಿದೆ. ಆದ್ದರಿಂದ